ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 18 ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 ಚಿತ್ರದುರ್ಗ ದಿನಾಂಕ: 20–07–2023 ಗುರುವಾರ ಪುಟ: 4 ಬೆಲೆ : ರೂ.2–00
Volume - 01 Issue - 18 Title- Code: KARKAN 28269 Chitradurga Date: 20-07-2023 Thursday Page: 4 Price: Rs. 2-00

ಒಳಪುಟದ ಸುದ್ದಿಗಳು

ಆಧಾರ್ ಸಂಬಂಧಿಸಿದ ಸಮಸ್ಯೆಗಳ ಪರಿಹಾರಕ್ಕೆ ನಿರ್ಲಕ್ಷ್ಯ: ಅಭಿಯಾನ ತೀವ್ರಗೊಳಿಸಲು ಸೂಚನೆ 2

ಡಿಕೆಶಿ ಮಾಸ್ಟರ್ ಮೈಂಡ್ ಆಫ್ ಪೊಲಿಟಿಕಲ್ ಆಗಿದ್ದಾರೆ ಮಮತಾ ಬ್ಯಾನರ್ಜಿ ಮೆಚ್ಚುಗೆ 3

ಕಾಂಗ್ರೆಸ್ ಅಧಿಕಾರ, ಪ್ರಧಾನಿ ಹುದ್ದೆಯಲ್ಲಿ ಆಸಕ್ತಿಯಿಲ್ಲ: ಖರ್ಗೆ 4

ಫಾಸ್ಟ್ ನ್ಯೂಸ್

ಶಾಲಾ ವಿದ್ಯಾರ್ಥಿಗಳನ್ನು ಕರೆತರುತ್ತಿದ್ದ ಆಟೋ ಪಲ್ಟಿ: 6 ವಿದ್ಯಾರ್ಥಿಗಳಿಗೆ ಗಾಯ

» ಚಳ್ಳಕೆರೆ

ನಗರದ ಪಾವಗಡ ರಸ್ತೆಯ ಸರ್ಕಾರಿ ಕೈಗಾರಿಕ ತರಬೇತಿಕೇಂದ್ರದಮುಂಭಾಗದಲ್ಲಿಆದರ್ಶಶಾಲೆಯ ವಿದ್ಯಾರ್ಥಿಗಳನ್ನು ಕರೆದ್ಯೊಯುತ್ತಿದ್ದ ಆಟೋ ಪಲ್ಟಿಯಾಗಿ ಆರು ವಿದ್ಯಾರ್ಥಿಗಳು ಸಣ್ಣಪುಟ್ಟ ಗಾಯಗಳಿಂದ ಪಾರಾಗಿದ್ದಾರೆ. ಸದರಿ ಆಟೋ ಚಳ್ಳಕೆರೆ ನಗರದಿಂದ ಶಾಲೆಗೆ ಹೋಗಿ ಅಲ್ಲಿಂದ ವಿದ್ಯಾರ್ಥಿಗಳನ್ನು ಕರೆತರುವ ಸಂದರ್ಭದಲ್ಲಿ ಆಟೋಚಾಲಕ ನಿರ್ಲಕ್ಷ್ಯತನದಿಂದ ಅವಘಡ ಸಂಭವಿಸಿದೆ. ಆಟೋ ಚಾಲಕ ಎದುರಿಗೆ ಬಂದ ಬಸ್‌ಗೆ ಸೈಡ್ ಕೊಡುವ ಯತ್ನದಲ್ಲಿ ಆಟೋ ಪಲ್ಟಿಯಾಗಿದೆ. ಆಟೋದಲ್ಲಿದ್ದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಾದ ಯುವರಾಜ(15), ಮಧುಸೂಧನ್(15), ರೋಹಿತ್‌ಗೌಡ(16), ವೆಂಕಟೇಶ್(15), ಕೀರ್ತಿಯಾದವ್(15), ಶ್ರೀಧರ(15) ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ವಾಪಾಸ್ ಆಗಿದ್ದಾರೆ. ಚಳ್ಳಕೆರೆ ಪೊಲೀಸರು ಆಸ್ಪತ್ರೆಗೆ ಭೇಟಿ ನೀಡಿ ವಿಚಾರಣೆ ನಡೆಸಿದ್ದಾರೆ. ಸುದ್ದಿ ತಿಳಿದ ಕೂಡಲೇ ಪೋಷಕರು ಆಸ್ಪತ್ರೆಗೆ ದಾವಿಸಿ ಮಕ್ಕಳ ಆರೋಗ್ಯ ವಿಚಾರಿಸಿದರು. ಮುಖ್ಯೋಪಾಧ್ಯಾಯ ಅಶೋಕ್‌ರೆಡ್ಡಿ, ಎಲ್.ರುದ್ರಮುನಿ, ಎಸ್‌ಡಿಎಂಸಿ ಸದಸ್ಯ ನಾಗರಾಜು ಮುಂತಾದವರು ಆಸ್ಪತ್ರೆಗೆ ಭೇಟಿ ನೀಡಿದ್ದರು.

ಬಾಲೇನಹಳ್ಳಿ ಗೇಟ್ ಬಳಿ ಎರಡು ಬೈಕ್‌ಗಳ ನಡುವೆ ಡಿಕ್ಕಿ : ಓರ್ವ ಸಾವು

» ಚಳ್ಳಕೆರೆ

ಚಳ್ಳಕೆರೆ ಠಾಣಾ ವ್ಯಾಪ್ತಿಯ ಬಾಲೇನಹಳ್ಳಿ ಬಳಿ ಮೋಟಾರ್ ಬೈಕ್ ಪಲ್ಟಿಯಾಗಿ ಬೈಕ್ ಸವಾರ ಚಿಕ್ಕಮಧುರೆ ಗ್ರಾಮದ ಎನ್.ಪಿ.ಮಾರುತಿ(24) ಚಿಕಿತ್ಸೆ ಫಲಕಾರಿಯಾಗದೆ ಚಿತ್ರದುರ್ಗದ ಬಸವೇಶ್ವರ ಆಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾನೆ. ಮೃತ ಮಾರುತಿ ತನ್ನ ಸ್ನೇಹಿತ ವೆಂಕಟೇಶನೊಂದಿಗೆ ಚಿಕ್ಕಮಧುರೆಯಿಂದ ರಾಮಜೋಗಿಹಳ್ಳಿ ಗ್ರಾಮಕ್ಕೆ ತೆರಳುತ್ತಿದ್ದ ಸಂದರ್ಭದಲ್ಲಿ ಎದುರಿನಿಂದ ಬಂದ ಬೈಕ್ ಡಿಕ್ಕಿ ಹೊಡೆದು ಈ ಅವಘಡ ಸಂಭವಿಸಿದೆ. ತೀರ್ವ ರಕ್ತಗಾಯದಿಂದ ನರಳುತ್ತಿದ್ದ ಮಾರುತಿಯನ್ನು ವೈದ್ಯರ ಸಲಹೆ ಮೇರೆಗೆ ಬಸವೇಶ್ವರ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಳ್ಳಕೆರೆ ಪೊಲೀಸರು ಪ್ರಕರಣದ ದಾಖಲಿಸಿದ್ದಾರೆ.

ಗೃಹಲಕ್ಷ್ಮಿ ಯೋಜನೆಗೆ ಅಗತ್ಯ ದಾಖಲೆಗಳು

» ಬೆಂಗಳೂರು,

ಗೃಹಲಕ್ಷ್ಮಿ ಯೋಜನೆಗೆ ಅರ್ಜಿ ಬಿಟ್ರಾ? ಅರ್ಜಿ ಸಲ್ಲಿಸೋದು ಯಾವಾಗ? ಯಾವೆಲ್ಲ ದಾಖಲೆಗಳು ಬೇಕು? ನಿಮ್ದು ಆಧಾರ್ ಕಾರ್ಡ್ ಇದ್ಯಾ? ಬ್ಯಾಂಕ್ ಬುಕ್ ಇದ್ಯಾ? ಯಾರ ಬಾಯಲ್ಲಿ ನೋಡಿದ್ರೂ ಇದೇ ಮಾತು. ಯಾರ ಮನೆಯಲ್ಲಿ ನೋಡಿದ್ರೂ ಇದೇ ಟಾಪಿಕ್. ಇದೀಗ ಈ ಎಲ್ಲಾ ಪ್ರಶ್ನೆಗಳಿಗೆ ಉತ್ತರ ಸಿಕ್ಕಿದೆ. ಗೃಹ ಲಕ್ಷ್ಮಿ ಯೋಜನೆಗೆ ಇಂದಿನಿಂದಲೇ ಅರ್ಜಿ ಶುರುವಾಗಲಿದೆ. ಹೌದು.. ರಾಜ್ಯದ ಮಹಿಳೆಯರು ಎದುರು ನೋಡ್ತಿರೋ ಗೃಹಲಕ್ಷ್ಮಿ ಯೋಜನೆಗೆ ಇಂದು ಇಂದು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಗೃಹಲಕ್ಷ್ಮಿ ಯೋಜನೆಗೆ ಚಾಲನೆ ನೀಡಲಿದರು. ಇಂದಿನಿಂದಲೇ ಅರ್ಜಿ ಸಲ್ಲಿಕೆಗೆ ಅವಕಾಶ ನೀಡಲಾಗುತ್ತದೆ. ಆದ್ರೆ ಆಗಸ್ಟ್‌ನಲ್ಲಿ ಗೃಹಲಕ್ಷ್ಮಿಯರ ಖಾತೆಗೆ 2 ಸಾವಿರ ಹಣ ಜಮೆಯಾಗಲಿದೆ. ಇನ್ನು ಅರ್ಜಿ ಸಲ್ಲಿಸುವುದು ಎಲ್ಲಿ? ಏನೆಲ್ಲ ದಾಖಲೆಗಳು ಬೇಕು ಎನ್ನುವ ವಿವರ ಈ ಕೆಳಗಿನಂತಿದೆ ನೋಡಿ.

ಗೃಹಲಕ್ಷ್ಮಿ' ಅರ್ಜಿ ಸಲ್ಲಿಕೆ ಹೇಗೆ?: 'ಗೃಹಲಕ್ಷ್ಮೀ' ಯೋಜನೆಯಡಿ ಮನೆ ಒಡತಿಗೆ ಪ್ರತೀ ತಿಂಗಳು 2 ಸಾವಿರ ರೂ. ಹಣ ಬರಲಿದೆ. ಇದೇ ಯೋಜನೆ ಅರ್ಜಿ ಸಲ್ಲಿಕೆ ಎಸ್‌ಎಂಎಸ್ ಮೂಲಕ ಆರಂಭವಾಗಲಿದೆ. ಮೊದಲಿಗೆ ನಿಮ್ಮ ಪಡಿತರ ಚೀಟಿ ಸಂಖ್ಯೆಯನ್ನು 8147500500 ಸಂಖ್ಯೆಗೆ ಖಒಖ ಮಾಡ್ಬೇಕು. ಹೀಗೆ ಎಸ್‌ಎಂಎಸ್ ಮಾಡುತ್ತಿದ್ದಂತೆಯೇ ಎರಡೇ ಸೆಕೆಂಡ್‌ನಲ್ಲೇ ಇಲಾಖೆಯಿಂದ ನಿಮಗೆ ಮೇಸೇಜ್ ಬರಲಿದೆ. ಅದರಲ್ಲಿ ಸ್ಥಳ, ಗೊತ್ತುಪಡಿಸಿದ ದಿನಾಂಕ, ಸಮಯ ಸಂದೇಶ ಬರಲಿದೆ. ಅದೇ ದಿನ, ಅದೇ ಸಮಯಕ್ಕೆ ಹೋಗಿ ಅರ್ಜಿ ಸಲ್ಲಿಸಬಹುದು. ಇನ್ನು ಅರ್ಜಿ ಸಲ್ಲಿಸಲು ಮನೆ ಒಡತಿ ಹೆಸರು ಇರೋ ಪಡಿತರ ಕಾರ್ಡ್ ಕಡ್ಡಾಯವಾಗಿದ್ದು, ಇದರ ಜತೆ ಮನೆ ಯಜಮಾನಿಯ ಆಧಾರ್ ಕಾರ್ಡ್ ಹಾಗೂ ಮೊಬೈಲ್ ಕೂಡಾ ತೆಗೆದುಕೊಂಡು ಹೋಗಬೇಕು. ವಿಷ್ಯ ಅಂದ್ರೆ ಮನೆ ಒಡತಿಯ ಪತಿಯ ಆಧಾರ್‌ಕಾರ್ಡ್ ಕೂಡಾ ಕಡ್ಡಾಯವಾಗಿದೆ.

ಒಂದು ವೇಳೆ ಪತಿ ತೆರಿಗೆದಾರರಾಗಿದ್ದರೆ ಅಂಥವರ ಅಕೌಂಟ್‌ಗೆ ಹಣ ಬರುವುದಿಲ್ಲ. ಇನ್ನು ಆಧಾರ್‌ಗೆ ಲಿಂಕ್ ಆಗಿರೋ ಅಕೌಂಟ್ ಬಿಟ್ಟು, ನಿಮ್ಮದೆ ಬೇರೆ ಅಕೌಂಟ್‌ಗೆ ಹಣ ಬೇಕಾದ್ರೆ ಪಾಸ್‌ಬುಕ್‌ನ ಜೆರಾಕ್ಸ್ ಪ್ರತಿ ತೆಗೆದುಕೊಂಡು ಹೋಗಬೇಕು. ಗೃಹಲಕ್ಷ್ಮಿಯರು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶವಿಲ್ಲ. ಕರ್ನಾಟಕ ಒನ್, ಗ್ರಾಮ ಒನ್, ಬೆಂಗಳೂರು ಒನ್ ಸೇರಿದಂತೆ ಸರ್ಕಾರಿ ಕೇಂದ್ರಗಳಲ್ಲಿ ಮಾತ್ರ ಅರ್ಜಿ ಸ್ವೀಕರಿಸಲಾಗುತ್ತೆ. ಅಂತೂ ಇಂತೂ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿಗಳಲ್ಲಿ ಒಂದಾಗ ಗೃಹಲಕ್ಷ್ಮೀ ಯೋಜನೆ ಇಂದಿನಿಂದ ಶುರುವಾಗಲಿದೆ. ಅರ್ಜಿ ಹಾಕಲು ಯಾವುದೇ ಮಧ್ಯವರ್ತಿಗಳ ಮೊರೆಹೋಗುವ ಅಗತ್ಯವಿಲ್ಲ. ಗೊಂದಲವಿದ್ದರೆ 1902 ನಂಬರ್‌ಗೆ ಕರೆ ಮಾಡಿ ಮಾಹಿತಿ ಪಡೆದುಕೊಳ್ಳಬಹುದು.

ಸ್ಥಗಿತಗೊಂಡಿದ್ದ ಕೃಷಿ ಭಾಗ್ಯ ಯೋಜನೆಗೆ ಮರುಚಾಲನೆ: ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಸ್ಥಗಿತಗೊಂಡಿದ್ದ ಕೃಷಿ ಭಾಗ್ಯ ಯೋಜನೆಗೆ ಮರುಚಾರಣೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿ ತಿಳಿಸಿದರು. ಸದಸ್ಯ ಗುರ್ಮೆ ಸುರೇಶ್ ಶೆಟ್ಟಿ ಕೃಷಿ ಸಮ್ಮಾನ್ ಯೋಜನೆಯ ಕುರಿತು ಪ್ರಸ್ತಾಪಿಸಿದ ವಿಷಯಕ್ಕೆ ಉತ್ತರಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ಮೂರು ಲಕ್ಷ ರೂಗಳಿಂದ ಐದು ಲಕ್ಷ ರೂ ಗಳ ವರೆಗೆ ಸಾಲದ ಮಿತಿಯನ್ನು ಹೆಚ್ಚಳ ಮಾಡಲಾಗಿದೆ. ಅಲ್ಲದೆ ಇನ್ನೂ ಹಲವಾರು ರೀತಿಯಲ್ಲಿ ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಯೋಜನೆಗಳನ್ನು ರೂಪಿಸಲಾಗಿದೆ. ಸದಸ್ಯ ಸುನಿಲ್ ಕುಮಾರ್ ಮಾತನಾಡಿ ಸಮ್ಮಾನ್ ಯೋಜನೆಯನ್ನು ಒಟ್ಟಿನಲ್ಲಿ ರಾಜ್ಯ ಸರ್ಕಾರ ಕೈಬಿಟ್ಟಿದೆ. ಅದನ್ನು ಬಿಟ್ಟು ಬೇರೆ ವಿಷಯದ ಬಗ್ಗೆ ಮಾತನಾಡಿದರೆ ಹೇಗೆ ಎಂದು ಪ್ರಶ್ನಿಸಿದರು. ಈಗಾಗಲೇ ನಿಮ್ಮ ಅವಧಿಯಲ್ಲಿ ಕೃಷಿ ಭಾಗ್ಯ ಸ್ಥಗಿತಗೊಳಿಸಲಾಗಿತ್ತು. ಅದನ್ನು ಆರಂಭಿಸಲಾಗಿದೆ ಹಾಗಾದರೆ ಕೃಷಿ ಭಾಗ್ಯ ನೀಡುವುದು ಬೇಡವೋ ಎಂದು ಪ್ರಶ್ನಿಸಿದಾಗ ಬಿಜೆಪಿ ಸದಸ್ಯರು ಸುಮ್ಮನಾದರು.

10 ರೂಪಾಯಿ ನಾಣ್ಯ ಸ್ವೀಕರಿಸಿ, ಚಲಾವಣೆಗೊಳಿಸಿ: ಜಿಲ್ಲಾಧಿಕಾರಿ ಸೂಚನೆ

» ಚಿತ್ರದುರ್ಗ

ಜಿಲ್ಲೆಯ ಎಲ್ಲಾ ವ್ಯಾಪಾರಿಗಳು, ವಾಣಿಜ್ಯ ಸಂಸ್ಥೆಗಳು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳು, ಸರ್ಕಾರದ ಇಲಾಖೆ ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ವದಂತಿಗಳನ್ನು ನಂಬದೆ, ರೂ.10/–ರ ಮುಖಬೆಲೆಯ ನಾಣ್ಯಗಳನ್ನು ಸ್ವೀಕರಿಸಿ, ಚಲಾವಣೆಗೊಳಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಸೂಚನೆ ನೀಡಿದ್ದಾರೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಸಿಬ್ಬಂದಿಗಳು 10 ರೂ. ಗಳ ನಾಣ್ಯಗಳನ್ನು ಬಸ್‌ಗಳಲ್ಲಿ ಪ್ರಯಾಣಿಕರಿಂದ ಸ್ವೀಕರಿಸುತ್ತಿಲ್ಲ, ಈ ಕುರಿತು ಕ್ರಮ ಜರುಗಿಸುವಂತೆ ಭಾರತೀಯ ರಿಸರ್ವ್ ಬ್ಯಾಂಕ್ ಬೆಂಗಳೂರಿನ ಪ್ರಾದೇಶಿಕ ಕಚೇರಿಯ ಮಹಾಪ್ರಬಂಧಕರು, ಕಳೆದ ತಿಂಗಳು ಜರುಗಿದ ರಾಜ್ಯ ಮಟ್ಟದ ಬ್ಯಾಂಕರ್‌ಗಳ ಸಮಿತಿಯ ಸ್ಟೀರಿಂಗ್ ಸಮಿತಿ ಸಭೆಯಲ್ಲಿ

ತಿಳಿಸಿದ್ದು, ಈ ಹಿನ್ನೆಲೆಯಲ್ಲಿ ರಾಜ್ಯ ಆರ್ಥಿಕ ಇಲಾಖೆ (ಆಯವ್ಯಯ ಮತ್ತು ಸಂಪನ್ಮೂಲ) ಸರ್ಕಾರದ ಕಾರ್ಯದರ್ಶಿ ಏಕ್‌ರೂಪ್ ಕೌರ್ ಅವರು 10 ರೂ. ನಾಣ್ಯವನ್ನು ಎಲ್ಲರೂ ಸ್ವೀಕರಿಸಿ, ಚಲಾವಣೆಗೊಳಿಸಲು ಜಾಗೃತಿ ಮೂಡಿಸುವಂತೆ ಎಲ್ಲ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿರುತ್ತಾರೆ. ಇದರನ್ವಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಬಸ್‌ಗಳಲ್ಲಿ 10 ರೂ. ಗಳ ನಾಣ್ಯವನ್ನು ಸಾರ್ವಜನಿಕರಿಂದ ಸ್ವೀಕರಿಸಬೇಕು ಹಾಗೂ ಚಲಾವಣೆಗೊಳಿಸಬೇಕು. ಅಲ್ಲದೆ ಎಲ್ಲಾ ವ್ಯಾಪಾರಿಗಳು, ವಾಣಿಜ್ಯ ಸಂಸ್ಥೆಗಳು, ಸರ್ಕಾರದ ಇಲಾಖೆ ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ತಮ್ಮ ಅನುಮಾನಗಳನ್ನು ಬದಿಗಿಟ್ಟು, ರೂ.10/–ರ ಮುಖಬೆಲೆಯ ನಾಣ್ಯಗಳನ್ನು ಕಾನೂನಾತ್ಮಕವಾಗಿ ಸ್ವೀಕರಿಸಬೇಕು ಹಾಗೂ ಚಲಾವಣೆಗೊಳಿಸಬೇಕು.

ರೂ.10/–ರ ನಾಣ್ಯ ಚಲಾವಣೆ ಬಗ್ಗೆ ಯಾವುದೇ ವದಂತಿಗಳನ್ನು ನಂಬದಂತೆ ಸಾರ್ವಜನಿಕರಿಗೆ ರಿಸರ್ವ್ ಬ್ಯಾಂಕ್ ಮನವಿ ಮಾಡಿದ್ದು, ಯಾವುದೇ ಹಿಂಜರಿಕೆಯಿಲ್ಲದೇ ತಮ್ಮ ಎಲ್ಲಾ ವಹಿವಾಟುಗಳಲ್ಲಿ ರೂ.10/–ರ ನಾಣ್ಯವನ್ನು ಕಾನೂನುಬದ್ಧವಾಗಿ ಸ್ವೀಕರಿಸುವುದನ್ನು ಮುಂದುವರೆಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ತಿಳಿಸಿದ್ದಾರೆ.

ಐವರು ಶಂಕಿತ ಉಗ್ರರ ಬಂಧನ; ಸಿಸಿಬಿ ಪೊಲೀಸರಿಗೆ ಸಿಎಂ ಸಿದ್ದರಾಮಯ್ಯ ಅವರು ಟ್ವೀಟ್ ಮೂಲಕ ಅಭಿನಂದನೆ

» ಬೆಂಗಳೂರು

ನಗರದಲ್ಲಿ ವಿಧ್ವಂಸಕ ಕೃತ್ಯವೆಸಗಲು ಸಂಚು ರೂಪಿಸಿದ್ದ ಐವರು ಶಂಕಿತ ಉಗ್ರರನ್ನು ಬಂಧಿಸುವ ಮೂಲಕ ಸಂಭವಿಸಬಹುದಾಗಿದ್ದ

ಭಾರೀ ಅನಾಹುತವನ್ನು ವಿಫಲಗೊಳಿಸಿರುವ ರಾಜ್ಯದ ಸಿಸಿಬಿ ಪೊಲೀಸರಿಗೆ ಸಿಎಂ ಸಿದ್ದರಾಮಯ್ಯ ಟವರು ಟ್ವೀಟ್ ಮೂಲಕ ಅಭಿನಂದನೆಗಳು ತಿಳಿಸಿದ್ದಾರೆ. ಭಯೋತ್ಪಾದಕ ಚಟುವಟಿಕೆಗಳಿಗೆ ಸೇರಿದಂತೆ ಯಾವುದೇ ತೆರನಾದ ದೇಶವಿರೋಧಿ ಚಟುವಟಿಗಳಲ್ಲಿ ತೊಡಗಿರುವವರನ್ನು ಪತ್ತೆಹಚ್ಚಿ, ಬೇರು ಸಮೇತ ಅಂತಹ ಶಕ್ತಿಗಳನ್ನು ರಾಜ್ಯದಿಂದ ಕಿತ್ತೊಗೆಯಲು ನಾವು ಸದಾ ಸಿದ್ಧರಿದ್ದೇವೆ. ನಾಡಿನ ಪ್ರತಿಯೊಬ್ಬರೂ ಸುರಕ್ಷತೆಯ ಬದುಕು ನೀಡಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದಿದ್ದಾರೆ.

ಪ್ರಮುಖ ಸುದ್ದಿ

ಚಳ್ಳಕೆರೆ ಪೊಲೀಸರ ಮಿಂಚಿನ ಕಾರ್ಯಚರಣೆ: ತಾಮ್ರದ ತಂತಿ ಪ್ರಕರಣ ಪತ್ತೆ

ಚಿಂದಿ ಆಯುವವರ ಚಮತ್ಕಾರಕ್ಕೆ ಪೋಲೀಸರು ಬೆರಗು

» ಚಳ್ಳಕೆರೆ

ತಾಲ್ಲೂಕಿನ ಹುಲಿಕುಂಟೆ ಗ್ರಾಮದ ಖಾಸಗಿ ಸೋಲಾರ ಪ್ಲಾಂಟ್‌ನಲ್ಲಿ ಸುಮಾರು 3 ಲಕ್ಷ ಮೌಲ್ಯದ ತಾಮ್ರದ ತಂತಿ ಕಳವಾಗಿ ಕೇವಲ ನಾಲ್ಕೇ ದಿನಗಳಲ್ಲಿ ಆರೋಪಿಗಳನ್ನು ಪತ್ತೆಹಚ್ಚುವ ಮೂಲಕ ಚಳ್ಳಕೆರೆ ಪೊಲೀಸರು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಹುಲಿಕುಂಟೆ ಗ್ರಾಮದ ಆಗ್ರೊ ಪೋಟೋವಾಲಿಕ್ ಸೋಲಾರಕಂಪನಿಯಲ್ಲಿ ಜುಲೈ 13ರಂದು ತಾಮ್ರದ ತಂತಿಗಳು ಕಳವಾದ ಬಗ್ಗೆ ಕಂಪನಿಯ ಸೆಕ್ಯೂರಿಟಿ ಗಾರ್ಡ್ ಜೆ.ಬಿ.ರಾಜು ಪೊಲೀಸರಿಗೆ ದೂರು ನೀಡಿದ್ದು, ಪಿಎಸ್‌ಐ ಶಿವರಾಜು ಪ್ರಕರಣ ದಾಖಲಿಸಿದ್ದರು.

ತಾಮ್ರದ ತಂತಿ ಕಳವನ್ನು ಗಂಭಿರವಾಗಿ ಪರಿಗಣಿಸಿದ ಪೊಲೀಸರು ಜಿಲ್ಲಾ ರಕ್ಷಣಾಧಿಕಾರಿ, ಹೆಚ್ಚುವರಿ ರಕ್ಷಣಾಧಿಕಾರಿ, ಉಪವಿಭಾಗದ ಡಿವೈಎಸ್ಪಿ ಮಾರ್ಗದರ್ಶನದಲ್ಲಿ ಠಾಣಾ ಇನ್ಸ್‌ಪೆಕ್ಟರ್ ರಾಜ ಫಕೃದ್ದೀನ್ ದೇಸಾಯಿ ಸಿಬ್ಬಂದಿಯೊಂದಿಗೆ ಕಳುವಾದ ಮಾಲಿನ ತನಿಖೆಯನ್ನು ಆರಂಭಿಸಿ ಚಾಕಚಕ್ಯತೆಯಿಂದ ಸೋಲಾರ ಕಂಪನಿಯ ಸನ್ನಿಹದಲ್ಲಿ ಚಿಂದಿ ಆಯುವ ವೃತ್ತಿ ಮಾಡುತ್ತಿದ್ದ ಕಲ್ಯಾಣದುರ್ಗ ಮೂಲದ ಸುಂಕಣ್ಣ, ಪುಪ್ಪ, ಮಲ್ಲಕ್ಕ, ಇ.ಸುಂಕಪ್ಪ ಇವರನ್ನು ವಶಕ್ಕೆ ತೆಗೆದುಕೊಂಡು ತನಿಖೆ ನಡೆಸಿದಾಗ ನಾಲ್ಕು ಆರೋಪಿಗಳು ಸೇರಿ ಕಳ್ಳತನ ಮಾಡಿದ ಬಗ್ಗೆ ತಿಳಿದು ಬಂದು ಕೂಡಲೇ ಅವರ ಮೇಲೆ ಪ್ರಕರಣ ದಾಖಲಿಸಿ ಬಂಧಿಸಿ ನ್ಯಾಯಾಂಗ ವಶಕ್ಕೆ ನೀಡಿರುತ್ತಾರೆ.

ಚಿನ್ನದ ಬೆಲೆ	
91.6 ಕೆಡಿಎಂ (ಗ್ರಾಂ)	5500
85 ಕೆಡಿಎಂ (ಗ್ರಾಂ)	5100

20–07–2023 ಗುರುವಾರ
20-07-2023 Thursday

ಬೆಳ್ಳಿ ಬೆಲೆ	
ಕೆಜಿ	63500

ಫಾಸ್ಟ್ ನ್ಯೂಸ್

ಅರ್ಜಿ ಆಹ್ವಾನ

» ದಾವಣಗೆರೆ

ಪರಿಶಿಷ್ಟ ಜಾತಿಯ ಮಹಿಳಾ ಸ್ವಸಹಾಯ ಸಂಘದ ಸದಸ್ಯರಿಗೆ ವಿವಿಧ ಜೀವನೋಪಾಯ ಚಟುವಟಿಕೆಗಳನ್ನು ಕೈಗೊಳ್ಳಲು ಸಮಾಜ ಕಲ್ಯಾಣ ಇಲಾಖೆಯ ಕೇಂದ್ರೀಯ ವಿಶೇಷ ಸಹಾಯಧನ ಕಾರ್ಯಕ್ರಮದಡಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ದೀನ ದಯಾಳ್ ಅಂತ್ಯೋದಯ ಯೋಜನೆ–ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನದ ಸಾಂಸ್ಥಿಕ ಅಭಿವೃದ್ಧಿ ಉಪಘಟಕದಡಿ ಸಂಘದ ಪ್ರತಿ ಸದಸ್ಯರಿಗೆ ರೂ 50,000 ಸಹಾಯಧನ ನಿಗದಿಪಡಿಸಲಾಗಿದೆ. ಅರ್ಜಿಯನ್ನು ಜುಲೈ 24ರ ಒಳಗಾಗಿ ಹರಿಹರ ನಗರಸಭೆಯ ಪೌರಾಯುಕ್ತರ ಕಚೇರಿಗೆ ಸಲ್ಲಿಸಬೇಕೆಂದು ಎಂದು ಹರಿಹರ ನಗರಸಭೆಯ ಪೌರಾಯುಕ್ತರು ಬಸವರಾಜಪ್ಪ ತಿಳಿಸಿದ್ದಾರೆ

ಉದ್ಯೋಗ ಮೇಳ ಜು.21 ಕ್ಕೆ

» ದಾವಣಗೆರೆ

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, 'ಮಾದರಿ ವೃತ್ತಿ ಕೇಂದ್ರದ ವತಿಯಿಂದ ಜುಲೈ 21 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾಡಳಿತ ಭವನದ ಕೊಠಡಿ ಸಂ. 51 ರ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಉದ್ಯೋಗ ಮೇಳದಲ್ಲಿ ಹಲವು ಖಾಸಗಿ ಕಂಪನಿಗಳು ಭಾಗವಹಿಸುತ್ತಿದ್ದು, ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೋಮಾ, ಬಿ.ಎಸ್ಸಿ(ನರ್ಸಿಂಗ್) ಎ.ಎನ್.ಎಮ್, ಜಿ.ಎನ್.ಎಮ್ ಹಾಗೂ ಪದವಿ ವಿದ್ಯಾರ್ಹತೆ ಹೊಂದಿದ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲಾಗುವುದು. ಆಸಕ್ತ ಅಭ್ಯರ್ಥಿಗಳು ನಿಗಧಿತ ಸಮಯಕ್ಕೆ ಕನಿಷ್ಠ 10 ಸೆಟ್ ಬಯೋಡಾಟಾ ಮತ್ತು ಆಧಾರ್ ಕಾರ್ಡ್‌ನೊಂದಿಗೆ ಜಿಲ್ಲಾ ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ. ಸಂ. 08192–259446, ಮೊ.6361550016 ಗೆ ಸಂಪರ್ಕಿಸಲು ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ.ಡಿ ತಿಳಿಸಿದ್ದಾರೆ.

ಹಿರಿಯ ಪ್ರಾಥಮಿಕ-ಸೆಕೆಂಡರಿ ಹಂತದ ಶಿಕ್ಷಕರ ಹುದ್ದೆಗೆ ಅರ್ಜಿ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯಲ್ಲಿ ಖಾಲಿ ಇರುವ ಬಿ.ಐ.ಇ.ಆರ್.ಟಿ (ಹಿರಿಯ ಪ್ರಾಥಮಿಕ–ಸೆಕೆಂಡರಿ ಹಂತ) ಹುದ್ದೆಗಳನ್ನು ತಾತ್ಕಾಲಿಕವಾಗಿ ನೇರಗುತ್ತಿಗೆ ಆಧಾರದ ಮೇಲೆ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಜುಲೈ 21 ಅರ್ಜಿ ಸಲ್ಲಿಸಲು ಕೊನೆಯ ದಿನ. 2023–24ನೇ ಸಾಲಿಗೆ ಸಮನ್ವಯ ಶಿಕ್ಷಣ ಮಧ್ಯವರ್ತನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಚಿತ್ರದುರ್ಗ ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಖಾಲಿ ಇರುವ ಸಮನ್ವಯ ಶಿಕ್ಷಣ ವಿಶೇಷ ಸಂಪನ್ಮೂಲ ಹಿರಿಯ ಪ್ರಾಥಮಿಕ–ಸೆಕೆಂಡರಿ ಹಂತದ ಶಿಕ್ಷಕರುಗಳ ಹುದ್ದೆಗಳನ್ನು ತಾತ್ಕಾಲಿಕವಾಗಿ ಆರ್.ಸಿ.ಐ ನಿಯಮದಂತೆ (ವಿಶೇಷ ಅಗ್ಯತೆಯುಳ್ಳ ಮಕ್ಕಳ ಬಗ್ಗೆ) ಬಿ.ಐ.ಇ.ಆರ್.ಟಿ ಹುದ್ದೆಗೆ B.Ed in special education from a RCI approved institution with possess a valid RCI CRR nuber OR B.Ed with arecognised Qualification (Certificate/Diploma) from RCI approved institution equivalent to B.ed in special education and possess a valid RCI CRR number. 6 Month Training of teaching in cross disability area in inciusive education ಹೊಂದಿರಬೇಕು. ಆಸಕ್ತ ಅಭ್ಯರ್ಥಿಗಳು ಈ ಮೇಲ್ಕಂಡ ವಿದ್ಯಾರ್ಹತೆಯನ್ನ ಪಡೆದ ಎಲ್ಲಾ ಅಂಕಪಟ್ಟಿಗಳು, ಆರ್.ಸಿ.ಐ ಶಾಶ್ವತ ಪ್ರಮಾಣ ಪತ್ರದೊಂದಿಗೆ ಸ್ವವಿವರವುಳ್ಳ ಮಾಹಿತಿಯನ್ನು ಜುಲೈ 17 ರಿಂದ ಜುಲೈ 21 ರವರೆಗೆ ಸಂಜೆ 4.30 ಗಂಟೆಯೊಳಗೆ ಮುದ್ದಾಂ ಉಪನಿರ್ದೇಶಕರು (ಆಡಳಿತ) ಹಾಗೂ ಪದನಿಮಿತ್ತ ಜಿಲ್ಲಾ ಯೋಜನಾಧಿಕಾರಿಗಳ ಕಚೇರಿ, ಸಮಗ್ರ ಶಿಕ್ಷಣ ಕರ್ನಾಟಕ, ಚಿತ್ರದುರ್ಗ ಈ ವಿಳಾಸಕ್ಕೆ ತಲುಪಿಸಬೇಕು. ಹೆಚ್ಚಿನ ಮಾಹಿತಿಗಾಗಿ ರಾಜೀವ್, ಡಿಐಇಆರ್‌ಟಿ, ಚಿತ್ರದುರ್ಗ ಮೊಬೈಲ್ ಸಂಖ್ಯೆ 8073269824 ಇವರನ್ನು ಸಂಪರ್ಕಿಸಬಹುದು. 06 ಬ್ಲಾಕ್‌ಗಳಲ್ಲಿ ಖಾಲಿ ಇರುವ ಹಿರಿಯ ಪ್ರಾಥಮಿಕ–ಸೆಕೆಂಡರಿ ಹಮದ ಬಿ.ಐ.ಇ.ಆರ್.ಟಿ. ಹುದ್ದೆಗಳ ಮಾಹಿತಿ: ಚಿತ್ರದುರ್ಗ–01, ಚಳ್ಳಕೆರೆ–02, ಹಿರಿಯೂರು–02, ಹೊಳಲ್ಕೆರೆ–02, ಹೊಸದುರ್ಗ–02, ಮೊಳಕಾಲ್ಮುರು–02 ಖಾಲಿ ಹುದ್ದೆಗಳು ಸೇರಿದಂತೆ ಒಟ್ಟು 11 ಹುದ್ದೆಗಳಿಗೆ ಖಾಲಿ ಇವೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ರವಿಶಂಕರ್ ರೆಡ್ಡಿ ತಿಳಿಸಿದ್ದಾರೆ.

ಜಿಲ್ಲಾ ಮಟ್ಟದ ಸಮಿತಿ ಸಭೆ

» ದಾವಣಗೆರೆ

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜುಲೈ 20 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಗಣದಲ್ಲಿ ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ–2005'ರಡಿ ಜಿಲ್ಲಾ ಮಟ್ಟದ ಸಮಿತಿ ಸಭೆಯನ್ನು ಏರ್ಪಡಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ.

ಆಧಾರ್ ಸಂಬಂಧಿಸಿದ ಸಮಸ್ಯೆಗಳ ಪರಿಹಾರಕ್ಕೆ ನಿರ್ಲಕ್ಷ್ಯ: ಅಭಿಯಾನ ತೀವ್ರಗೊಳಿಸಲು ಸೂಚನೆ

» ಚಿತ್ರದುರ್ಗ

ಆಧಾರ್ ನೊಂದಣಿ, ನವೀಕರಣ, ತಿದ್ದುಪಡಿಗಳಿಗೆ ಸಂಬಂಧಿತ ಸಮಸ್ಯೆಗಳಿಗೆ ಪರಿಹಾರ ಒದಗಿಸಬೇಕು. ಆಧಾರ್ ನೋಂದಣಿ ಸಂಬಂಧಿತ ಸಮಸ್ಯೆಗಳಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮಾಲೋಚಿಸಿ, ಸಮಸ್ಯೆ ಪರಿಹಾರಕ್ಕೆ ಮುಂದಾಗಬೇಕು, ನಿರ್ಲಕ್ಷ್ಯ ತೋರಿದಲ್ಲಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಆಧಾರ್ ಜಿಲ್ಲಾ ಸಂಯೋಜಕ ರಂಗನಾಥ್ ಅವರಿಗೆ ತಾಕೀತು ಮಾಡಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾಮಟ್ಟದ ಆಧಾರ್ ಮೇಲ್ವಿಚಾರಣೆ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜನರು ಆಧಾರ್ ನೋಂದಣಿಗೆ ಅಲ್ಲಿಗೆ ಬರಬೇಕು, ಇಲ್ಲಿಗೆ ಬರಬೇಕು ಎಂದು ಹೇಳುವ ಮೂಲಕ ಉದಾಸೀನ ತೋರಿ, ವರ್ಷಗಟ್ಟಲೇ ಸತಾಯಿಸುತ್ತೀರಾ? ಜಿಲ್ಲೆಯ ಜನರ ಬಗ್ಗೆ ನಿಮಗೆ ಕಾಳಜಿ ಇಲ್ಲವೇ? ಎಂದು ಪ್ರಶ್ನಿಸಿದ ಜಿಲ್ಲಾಧಿಕಾರಿಗಳು, ಆಧಾರ್ ಸಂಬಂಧಿಸಿದ ಸಮಸ್ಯೆಗಳಿಗೆ ಸರಿಯಾಗಿ ಸ್ಪಂದಿಸದ ಆಧಾರ್ ಜಿಲ್ಲಾ ಸಂಯೋಜಕ ರಂಗನಾಥ್ ಕಾರ್ಯವೈಖರಿಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಸಾರ್ವಜನಿಕರಿಗೆ ಸರಿಯಾಗಿ ಮಾಹಿತಿ ನೀಡದೇ ನಿರ್ಲಕ್ಷ್ಯ ವಹಿಸಿದಲ್ಲಿ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಆಧಾರ್ ಕಾರ್ಡ್ ಇಲ್ಲದೇ ಇದ್ದರೆ ಸರ್ಕಾರದ ವಿವಿಧ ಯೋಜನೆಗಳಿಂದ ಜಿಲ್ಲೆಯ ಜನರು ವಂಚಿತರಾಗುತ್ತಾರೆ. ಯಾವ ಸೌಲಭ್ಯವೂ ದೊರೆಯುವುದಿಲ್ಲ. ಪ್ರತಿಯೊಂದು ಸೌಲಭ್ಯವನ್ನು ಆಧಾರ್ ಸಂಖ್ಯೆ ಜೋಡಣೆಯಾಗಿರುವ ಬ್ಯಾಂಕ್ ಖಾತೆಯ ಮೂಲಕ ನೇರ ನಗದು ವರ್ಗಾವಣೆ ಮೂಲಕ ಸೌಲಭ್ಯ ಕಲ್ಪಿಸಲಾಗುತ್ತಿದೆ.

ಪ್ರತಿಯೊಂದು ಯೋಜನೆಗೂ ಆಧಾರ್ ಕಾರ್ಡ್ ಮಹತ್ವದ್ದಾಗಿದ್ದರೂ, ಇದರ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದೆ, ಆಧಾರ್ ನೋಂದಣಿ, ನವೀಕರಣ ಅಥವಾ ತಿದ್ದುಪಡಿಗಳ ಕುರಿತು ಉದಾಸೀನ ತೋರುವುದು ಸಲ್ಲದು. ಜಿಲ್ಲೆಯ ಜನರಿಗೆ ಆಧಾರ್ ಬಗ್ಗೆ ಸಮಸ್ಯೆಯಾಗದಂತೆ ತ್ವರಿತಗತಿಯಲ್ಲಿ ಆಧಾರ್ ನೋಂದಣಿ ಹಾಗೂ ದಾಖಲಾತಿ ನವೀಕರಣ ಕಾರ್ಯಕ್ಕೆ ಮುಂದಾಗಬೇಕು. ಈ ಕುರಿತು ಜಿಲ್ಲೆಯ ಜನರಿಗೆ ವ್ಯಾಪಕ ಪ್ರಚಾರ ನೀಡಿ, ಜಾಗೃತಿ ಮೂಡಿಸಬೇಕು ಎಂದು ತಾಕೀತು ಮಾಡಿದರು.ಅನಾರೋಗ್ಯ, ಅಪಘಾತಕ್ಕೆ ಒಳಗಾದವರು, ಷೋಷಕರು, ಸಂಬಂಧಕರು ಇಲ್ಲದೇ ಇರುವ ಹಾಗೂ ಇನ್ನೀತರೆ ಕಾರಣಗಳಿಂದ ಸಂಕಷ್ಟದ ಪರಿಸ್ಥಿತಿಯಲ್ಲಿರುವವರು ಆಧಾರ್ ಕೇಂದ್ರಗಳಿಗೆ ತೆರಳಿ ನೋಂದಣಿ ಮಾಡಿಸಲು ಸಾಧ್ಯವಾಗದೇ ಇರುವವರ ಮನೆಗೆ ಸಿಬ್ಬಂದಿಗಳೇ ಖುದ್ದಾಗಿ ಭೇಟಿ ನೀಡಿ, ಆಧಾರ್ ನೋಂದಣಿ ಹಾಗೂ ದಾಖಲಾತಿ ನವೀಕರಣಕ್ಕೆ ಅಗತ್ಯ ಕ್ರಮವಹಿಸಬೇಕು ಎಂದು ಆಧಾರ್ ಜಿಲ್ಲಾ ಸಂಯೋಜಕರಿಗೆ ಸೂಚನೆ ನೀಡಿದರು.

ಆಧಾರ್ ಜಿಲ್ಲಾ ಸಮಾಲೋಚಕರು ಆಧಾರ್ ಸಂಬಂಧಿತ ಸಮಸ್ಯೆಗಳಿಗೆ ಪರಿಹಾರ ಒದಗಿಸಬೇಕು.

ಆಧಾರ್ ನೋಂದಣಿ ಸಂಬಂಧಿತ ಜಿಲ್ಲೆಗೆ ಏನಾದರೂ ಅವಶ್ಯಕತೆ ಇದ್ದರೆ, ಸಂಬಂಧಪಟ್ಟ ಅಧಿಕಾರಿಗಳ ಜೊತೆಗೆ ಮಾತನಾಡಿ, ಸೂಕ್ತ ವ್ಯವಸ್ಥೆ ಕಲ್ಪಿಸಬೇಕು, ಸಮಸ್ಯೆ ಎದುರಾದಲ್ಲಿ ಸಂಬಂಧಪಟ್ಟವರ ಗಮನಕ್ಕೆ ತಂದು ಬಗೆಹರಿಸಿಕೊಳ್ಳಬೇಕು ಎಂದು ಹೇಳಿದರು. ಜಿಲ್ಲೆಯಲ್ಲಿ ಇದುವರೆಗೂ 18,57,930 ಆಧಾರ್ ಕಾರ್ಡ್ ಜನರೇಟ್ ಮಾಡಲಾಗಿದ್ದು, 0–5 ವರ್ಷದೊಳಗಿನ 66,580, 5–18 ವರ್ಷದೊಳಗಿನ 3,54,522 ಹಾಗೂ 18 ವರ್ಷ ಮೇಲ್ಪಟ್ಟ 14,36,828 ಆಧಾರ್ ಕಾರ್ಡ್ ಜನರೇಟ್ ಮಾಡಲಾಗಿದೆ ಎಂದು ಆಧಾರ್ ಜಿಲ್ಲಾ ಸಂಯೋಜಕ ರಂಗನಾಥ್ ಸಭೆಗೆ ಮಾಹಿತಿ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳ ಕಳೆದ ಒಂದು ವರ್ಷದ ಅವಧಿಯಲ್ಲಿ ಆಧಾರ್ ನೋಂದಣಿ, ನವೀಕರಣ, ತಿದ್ದುಪಡಿಗಳಿಗೆ ಸಂಬಂಧಿಸಿದ ಅಂಕಿ–ಅಂಶಗಳೊಂದಿಗೆ ಪ್ರಗತಿ ವರದಿಯನ್ನು ಸಲ್ಲಿಸಬೇಕು. ಜಿಲ್ಲಾ ಕೇಂದ್ರ, ತಾಲ್ಲೂಕು ಹಾಗೂ ಹೋಬಳಿ ಕೇಂದ್ರಗಳಿಂದ ದೂರವಿರುವ ಗ್ರಾಮಗಳಿಗೆ ಭೇಟಿ ನೀಡಿ, ವಿಶೇಷ ಅಭಿಯಾನ ಹಮ್ಮಿಕೊಳ್ಳಬೇಕು ಎಂದು ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಆಧಾರ್ ನೋಂದಣಿ ಹಾಗೂ ದಾಖಲಾತಿನವೀಕರಣಕ್ಕೆಸಂಬಂಧಪಟ್ಟಂತೆ ತೊಂದರೆಗಳಿದ್ದಲ್ಲಿ ಆಯಾ ತಹಶೀಲ್ದಾರ್ ಕಚೇರಿಗೆ ಭೇಟಿ ನೀಡಿ ಮಾಹಿತಿ ನೀಡಿದರೆ ಹೆಚ್ಚುವರಿಯಾಗಿ ಆಧಾರ್ ನೋಂದಣಿ ಕಿಟ್‌ಗಳ ಸೌಲಭ್ಯ ಒದಗಿಸುವ ಮೂಲಕ ಸಮಸ್ಯೆ ನಿವಾರಣೆಗೆ ಅಗತ್ಯ ಕ್ರಮವಹಿಸಲಾಗುವುದು ಎಂದರು.

ಯುಐಡಿಎಐನ ಪ್ರಾದೇಶಿಕ ಕಚೇರಿಯ ಯೋಜನಾ ವ್ಯವಸ್ಥಾಪಕ ವಿಜಯ್ ಕುಮಾರ್, ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಸತೀಶ್ ರೆಡ್ಡಿ ಇದ್ದರು.

ರೆಡ್ಡಿಹಳ್ಳಿ ಕ್ರಾಸ್ ಬಳಿ ಸರಣಿ ಅಪಘಾತ; 3 ವಾಹನಗಳ ಡಿಕ್ಕಿ: ನಾಲ್ವರಿಗೆ ಗಾಯ

» ಚಳ್ಳಕೆರೆ

ತಾಲ್ಲೂಕಿನ ದೊಡ್ಡೇರಿ ಗ್ರಾಮದ ರೆಡ್ಡಿಹಳ್ಳಿ ಕ್ರಾಸ್ ಬಳಿ ಎರಡು ಮಹೇಂದ್ರ ಜೀಪ್ ಮತ್ತು ಟಾಟಾ ಏಸ್ ವಾಹನದ ನಡುವೆ ಸರಣಿ ಅಪಘಾತ ಸಂಭವಿಸಿ ನಾಲ್ವರು ಗಾಯಗೊಂಡಿದ್ದಾರೆ. ಚಳ್ಳಕೆರೆ ಕಡೆಯಿಂದ ದೊಡ್ಡೇರಿ ಗ್ರಾಮದ ಮೂಲಕ ದೇವರಮರಿಕುಂಟೆಗೆ ಹೊರಟಿದ್ದ ಮಹೇಂದ್ರಜೀಪ್‌ಗೆ ಪರಶುರಾಮಪುರದಿಂದ ಆಗಮಿಸಿದ ಮಹೇಂದ್ರಜೀಪ್ ಡಿಕ್ಕಿ ಹೊಡೆದಿದೆ.

ಮಹೇಂದ್ರಜೀಪ್‌ನ ಮಾಲೀಕ ಎಂ.ಪಿ.ವೀರೇಂದ್ರಪಟೀಲ್(29), ಟಾಟಾ ಏಸ್ ವಾಹನ ಚಾಲಕ ನಾಸೀರ್‌ವುದ್ದಿ, ಮಹೇಂದ್ರಜೀಪ್ ಚಾಲಕ ಬಾಬ್ ಜಾನ್(38) ಗಾಯಗೊಂಡು ಇಲ್ಲಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಚಳ್ಳಕೆರೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಡಾ. ಕೆ. ಜೈಮುನಿಗೆ ಭಾರತೀಯ ಸಾಂಸ್ಕೃತಿಕ ಯೋಗರತ್ನ ಪ್ರಶಸ್ತಿ

» ದಾವಣಗೆರೆ

ಅಖಿಲ ಕರ್ನಾಟಕ ಸಾಂಸ್ಕೃತಿಕ ಪರಿಷತ್ತು ಬೆಂಗಳೂರು ಇವರ ಆಶ್ರಯದಲ್ಲಿ ಗದಗ ನಗರದ ಡಾ. ಅಂಬೇಡ್ಕರ್ ಸಭಾಭವನದಲ್ಲಿ 9ನೇ ಅಖಿಲ ಭಾರತ ಸಾಂಸ್ಕೃತಿಕ ಸಮ್ಮೇಳನ ಮತ್ತು ರಾಷ್ಟ್ರ ಮತ್ತು ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಹಾಗೂ ಸಾಧಕರಿಗೆ ಸನ್ಮಾನ ಮತ್ತು ಸಾಂಸ್ಕೃತಿಕ ನುಡಿಸಿರಿ ಸಮಾರಂಭದಲ್ಲಿ ಅಂತರಾಷ್ಟ್ರೀಯ ಯೋಗಪಟು ಯೋಗಚಾರ್ಯ ಡಾಕ್ಟರೇಟ್ ಪುರಸ್ಕೃತರಾದ ಕೆ. ಜೈಮುನಿ ಅವರಿಗೆ 'ಭಾರತೀಯ ಸಾಂಸ್ಕೃತಿಕ ಯೋಗರತ್ನ' ಪ್ರಶಸ್ತಿಯನ್ನು ಸಂಸ್ಥೆಯ ರಾಜ್ಯಾಧ್ಯಕ್ಷ ಮನೋಹರ್ ನಾಯಕ್ ಅವರು ಪ್ರಧಾನ ಮಾಡಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ತಹಶೀಲ್ದಾರ್ ರವರು ಮತ್ತು ಹಿರಿಯ ಸಾಹಿತಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು

ಜುಲೈ 27 ರಂದು ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ

» ಚಿತ್ರದುರ್ಗ

ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆ, ಕ್ಷೇತ್ರಿಯ ಕಚೇರಿ ಬಳ್ಳಾರಿಯು "ನಿಧಿ ಆಪ್ಕೆ ನಿಕಟ್: ಭವಿಷ್ಯ ನಿಧಿ ನಿಮ್ಮ ಹತ್ತಿರಕ್ಕೆ" ಕಾರ್ಯಕ್ರಮದ ವಿಸ್ತೃತ ಮತ್ತು ಬಲಪಡಿಸಿದ ಆವೃತ್ತಿಯನ್ನು ಇದೇ ಜುಲೈ 27 ರಂದು ಬೆಳ್ಳಿಗೆ 9 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಚಿತ್ರದುರ್ಗ ನಗರದ ಅರವಿಂದ ಲಿಮಿಟೆಡ್‌ನಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮವು ಕಾರ್ಮಿಕ, ಪಿಂಚಣಿದಾರರ ಮತ್ತು ಉದ್ಯೋಗದಾತರ ಕುಂದುಕೊರತೆ ಪರಿಹಾರ ಮತ್ತು ಮಾಹಿತಿ ವಿನಿಮಯಕ್ಕೆ ವಿಶಾಲ ವೇದಿಕೆಯಾಗಿ, ಅರಿವು ಮೂಡಿಸುವ ಮತ್ತು ಪ್ರಭಾವ ಬೀರುವ ಕಾರ್ಯಕ್ರಮವಾಗಿದೆ.

ಉದ್ಯೋಗದಾತರ ಕರ್ತವ್ಯಗಳು ಮತ್ತು ಜವಾಬ್ದಾರಿಗಳ ಅರಿವು, ಕಾರ್ಮಿಕರಿಗೆ, ಉದ್ಯೋಗದಾತರಿಗೆ, ಪ್ರಧಾನ ಉದ್ಯೋಗದಾತರಿಗೆ ಮತ್ತು ಗುತ್ತಿಗೆದಾರರಿಗೆ ಲಭ್ಯವಿರುವ ಆನ್‌ಲೈನ್ ಸೇವೆಗಳು ಮಾಹಿತಿ, ಹೊಸ ಉಪಕ್ರಮಗಳು, ಸುಧಾರಣೆಗಳ ಮಾಹಿತಿ ಒದಗಿಸುವುದು ಕೂಡ ಕಾರ್ಯಕ್ರಮದ ಭಾಗವಾಗಿದೆ. ಎಲ್ಲಾ ಕಾರ್ಮಿಕರು, ಪಿಂಚಣಿದಾರರು, ಉದ್ಯೋಗದಾತರು "ನಿಧಿ ಆಪ್ಕೆ ನಿಕಟ್: ಭವಿಷ್ಯ ನಿಧಿ ನಿಮ್ಮ ಹತ್ತಿರಕ್ಕೆ" ಕಾರ್ಯಕ್ರಮಕ್ಕೆ ಹಾಜರಾಗಿ ಪ್ರಯೋಜನ ಪಡೆಯಬೇಕು ಎಂದು ಒಳ್ಳಾರಿ ಕ್ಷೇತ್ರಿಯ ಕಚೇರಿಯ ಕ್ಷೇತ್ರಿಯ ಭವಿಷ್ಯ ನಿಧಿ ಆಯುಕ್ತ ಕೆ. ವೆಂಕಟ ಸುಬ್ಬಯ್ಯ ತಿಳಿಸಿದ್ದಾರೆ.

ಪ್ರಮುಖ ಸುದ್ದಿ

ಜನರಿಗೆ ಅಟಲ್ ಜೀ ಜನಸ್ನೇಹಿ ಕೇಂದ್ರದ ಸೇವೆಗಳು

» ಬೆಂಗಳೂರು

ರಾಜ್ಯದ ಜನರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ನಾಡಕಚೇರಿಯಲ್ಲಿ ಅಟಲ್ ಜೀ ಜನಸ್ನೇಹಿ ಕೇಂದ್ರವನ್ನು ಸ್ಥಾಪಿಸಲಾಗಿದೆ. ಈ ಕೇಂದ್ರಗಳ ಮೂಲಕ ಹಲವು ಸೇವೆಗಳನ್ನು ರಾಜ್ಯ ಸರ್ಕಾರ ಒದಗಿಸುತ್ತಿದೆ. ಹಾಗಾದ್ರೇ ಯಾವ ಸೇವೆಗಳು ಲಭ್ಯವಿದೆ.

ರಾಜ್ಯ ಸರ್ಕಾರದ ಕಂದಾಯ ಇಲಾಖೆಯ ವ್ಯಾಪ್ತಿಯಲ್ಲಿನ ನಾಡಕಛೇರಿಗಳಲ್ಲಿ ಅಟಲ್ ಜೀ ಜನಸ್ನೇಹಿ ಕೇಂದ್ರವನ್ನು ಸ್ಥಾಪಿಸಲಾಗಿದೆ. ಈ ಕೇಂದ್ರಗಳಲ್ಲಿ ಸುಮಾರು 43 ಸೇವೆಗಳು, ಭೂಮಿ ಸೇವೆಗಳು, ಮೋಜಣಿ ಸೇರಿದಂತೆ ವಿವಿಧ ಸೇವೆಗಳನ್ನು ಗ್ರಾಮೀಣ ಜನರಿಗೆ ಒದಗಿಸಲಾಗುತ್ತಿದೆ.

ಹೀಗಿವೆ ಅಟಲ್ ಜೀ ಜನಸ್ನೇಹಿ ಕೇಂದ್ರಗಳಲ್ಲಿ ನೀಡುವ ಸೇವೆಗಳು ಹಾಗೂ ಶುಲ್ಕ

ಜಾತಿ ಮತ್ತು ಆದಾಯ ದೃಢೀಕರಣ ಪತ್ರ – ಅರ್ಜಿ ಶುಲ್ಕ ರೂ.40, ಅವಧಿ 21 ದಿನ.

ಜಾತಿ ಪ್ರಮಾಣ ಪತ್ರ (ಪ್ರವರ್ಗ–1) – ರೂ.40 ಅರ್ಜಿ ಶುಲ್ಕ, 21 ದಿನ ಅವಧಿ

ಅನುಸೂಚಿತ ಜಾತಿ ಅಥವಾ ಅನುಸೂಚಿತ ಪಂಗಡಗಳ ಪ್ರಮಾಣ ಪತ್ರ – ರೂ.40 ಶುಲ್ಕ, 21 ದಿನ ಅವಧಿ.

ಆದಾಯ ದೃಢೀಕರಣ ಪತ್ರ

ಇಬ್ಬರು ಕುಖ್ಯಾತಿ ದರೋಡೆಕೋರರ ಬಂಧನ

» ಚಿತ್ರದುರ್ಗ

ಪಿಸ್ತೂಲ್ ನಿಂದ ಹೆದರಿಸಿ ಮನೆ ಮಾಲೀಕರು ಎಲ್ಲರನ್ನು ಮನೆ ಒಳಗಡೆ ಕೂಡಿ ಹಾಕಿ ಚಿನ್ನಾಭರಣ, ನಗದು ಇತ್ಯಾದಿಗಳನ್ನು ದರೋಡೆ ಮಾಡಿದ್ದ ಇಬ್ಬರು ಕುಖ್ಯಾತಿ ದರೋಡೆಕೋರರನ್ನು ಬಂಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪರಶುರಾಮ್ ತಿಳಿಸಿದರು.

ಇಲ್ಲಿನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಸೋಮವಾರ ಸಂಜೆ ಕರೆಯಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಚಿತ್ರದುರ್ಗ ನಗರದ ಬ್ಯಾಂಕ್ ಕಾಲೋನಿಯ ಸೇತುರಾಂ ಮನೆಯ ಬಳಿಯ ನಜೀರ್ ಅಹಮದ್ ಇಬ್ರಾಹಿಂಸಾಬ್ ರವರು ಸೇರಿದಂತೆ ಆ ಮನೆಯವರೆಲ್ಲರನ್ನು ಜುಲೈ 8 ರಂದು ಮೂರು ಜನ ದುಷ್ಕರ್ಮಿಗಳು ಮಾರಕಾಸ್ತ್ರಗಳನ್ನು ಹಿಡಿದುಕೊಂಡು ನಜೀರ್ ಅಹಮದ್ ರವರ ಮನೆಗೆ ನುಗ್ಗಿ ಮನೆಯಲ್ಲಿದ್ದ ನಜೀರ್ ಅಹಮದ್ ಮತ್ತು ಆತನ ಕುಟುಂಬದವರನ್ನು ಹೆದರಿಸಿ, 50 ಲಕ್ಷ ಹಣಕ್ಕಾಗಿ ಬೇಡಿಕೆಯನ್ನಿಟ್ಟು ಮನೆಯ ಬೆಡ್ ರೂಂನಲ್ಲಿ ಅಕ್ರಮವಾಗಿ ಕೂಡಿ ಹಾಕಿ ಮನೆಯಲ್ಲಿದ್ದ ಬಂಗಾರದ ಆಭರಣಗಳನ್ನು ಸುಲಿಗೆ ಮಾಡಿ, ಹಣಕ್ಕಾಗಿ ಬೇಡಿಕೆಯನ್ನಿಟ್ಟು ಮನೆಯಲ್ಲಿದ್ದ ಸಮೀರ್ ಅಹಮದ್ ಮತ್ತು ಷಜಹಾನ್ ರವರನ್ನು ತಮ್ಮ ಬಳಿ ಇದ್ದ ಕಾರಿನಲ್ಲಿ ಅಪಹರಿಸಿಕೊಂಡು ಹೋಗಿ 50 ಲಕ್ಷ ಹಣವನ್ನು ಸುಲಿಗೆ ಮಾಡಿಕೊಂಡು ಹೋಗಿದ್ದ ಆರೋಪಿಗಳಾದ ಬೆಂಗಳೂರಿನ ಚಾಮುಂಡಿ ನಗರದ ಆರ್.ಟಿ.ನಗರ ಅಯ್ಯಪ್ಪ ಸ್ವಾಮಿ ದೇವಸ್ಥಾನದ ಎದುರು, ಚೋಳನಾಯಕನಹಳ್ಳಿಯ ಕಾರು ಚಾಲಕ ಸಮ್ಮು ಅಲಿಯಾಸ್ ಬಷೀರ್ ಸಾಬ್(38) ತಂದೆ ಮೆಹ್ಹರಾಜ್ ಕರೀಂಸಾಬ್, ಬಿಹಾರ ರಾಜ್ಯದ ಅರಾರಿಯಾ ಜಿಲ್ಲೆಯ ಹರಿಯಾ ಸಮೀಪದ ಮುರ್ಬುಲ್ಲ ಗ್ರಾಮದ ಬಟ್ಟೆ ವ್ಯಾಪಾರಿ ಮಹಮ್ಮದ್ ಸಾಕೀಬ್ ಆಲಂ(37) ತಂದೆ ಮಹಮ್ಮದ್ ಇವರನ್ನು ಪೊಲೀಸರು ದಸ್ತಗಿರಿ ಮಾಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಬಂಧಿತ ಆರೋಪಿಗಳಿಂದ 48,53,900 ರೂ.ನಗದು, 185.600 ಗ್ರಾಂ ತೂಕದ ಅಂದಾಜು 9,28,000 ರೂ ಬೆಲೆ ಬಾಳುವ ವಿವಿಧ ನಮೂನೆಯ ಬಂಗಾರದ ಆಭರಣಗಳು, 345 ಗ್ರಾಂ ತೂಕದ ಅಂದಾಜು 74,150 ರೂ ಬೆಲೆ ಬಾಳುವ ವಿವಿಧ ನಮೂನೆಯ ಬೆಳ್ಳಿಯ ಆಭರಣಗಳು, ಕೃತ್ಯಕ್ಕೆ ಬಳಸಿದ ನಕಲಿ ನಂಬರ್ ಪ್ಲೇಟ್, 7,30,000 ರೂ. ಬೆಲೆ ಬಾಳುವ ಕಾರು, ಹಿರಿಯೂರು ನಗರ ಠಾಣೆ ಕೇಸಿಗೆ ಸಂಬಂದಿಸಿದ 762 ಗ್ರಾಂ ತೂಕದ ಅಂದಾಜು 53,340 ರೂ ಬೆಲೆ ಬಾಳುವ ವಿವಿಧ ನಮೂನೆಯ ಬೆಳ್ಳಿ–ಆಭರಣಗಳು ಸೇರಿ ಒಟ್ಟು 66,39,390 ರೂ. ಮೌಲ್ಯದ ಮಾಲನ್ನು ವಶಪಡಿಸಿಕೊಳ್ಳಲಾಗಿದೆ. ಸದರಿ ಪ್ರಕರಣದಲ್ಲಿ ತಲೆಮರೆಸಿಕೊಂಡಿದ್ದ ಬೆಂಗಳೂರಿನ ಕೆ.ಆರ್.ಪುರಂ ಮುಖ್ಯ ರಸ್ತೆ, ಕೆ.ಆರ್.ಪುರಂ ದೇವಸಂದ್ರದ ಅಣ್ಣಯ್ಯಪ್ಪ ಲೇಔಟ್, ಮೆಕ್ಕಾ ಮಸೀದಿ ರಸ್ತೆ ಹಿಂಭಾಗದ ಬಟ್ಟೆ ವ್ಯಾಪಾರಿ ಪ್ರಸನ್ನಕುಮಾರ(38) @ ಪ್ರಸನ್ನ ತಂದೆ ಅಶೋಕನ್ ಬಂಧಿಸಿ ಬಂಧಿತ ಆರೋಪಿಯಿಂದ ಮೋಟಾರ್ ಸೈಕಲ್ ಮತ್ತು ಆಯುಧ, ಪ್ರಕರಣಕ್ಕೆ ಸಂಬಂದಿಸಿದ ಹಣವನ್ನು ಪೊಲೀಸರು ವಶ ಪಡಿಸಿಕೊಂಡಿದ್ದಾರೆ. ಹಿರಿಯೂರು, ಬೆಂಗಳೂರು ಸೇರಿದಂತೆ ಮತ್ತಿತರ ಕಡೆಗಳಲ್ಲಿ ಆರೋಪಿಗಳ ವಿರುದ್ಧ ಪ್ರಕರಣ ದಾಖಲು ಮಾಡಲಾಗಿದೆ ಎಂದು ಎಸ್ಪಿ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕ.ಎಸ್.ಜೆ.ಕುಮಾರಸ್ವಾಮಿ, ಚಿತ್ರದುರ್ಗ ಉಪವಿಭಾಗದ ಡಿ.ವೈ.ಎಸ್.ಪಿ ಅನಿಲ್‌ಕುಮಾರ್.ಹೆಚ್.ಆರ್ ನೇತೃತ್ವದಲ್ಲಿ ತಂಡ ರಚಿಸಿ ಪೊಲೀಸ್ ವೃತ್ತನಿರೀಕ್ಷಕ ನಯೀಂ ಅಹಮದ್, ಪಿಎಸ್‌ಐ ರಘು ಮತ್ತಿತರರು ಪತ್ತೆ ಕಾರ್ಯದಲ್ಲಿ ಪಾಲ್ಗೊಂಡಿದ್ದು ಅವರನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಶ್ಲಾಘಿಸಿದ್ದಾರೆ.

ಪ್ರತಿಯೊಬ್ಬ ವಿಕಲಚೇತನರು ತಪ್ಪದೇ ತಪಾಸಣೆ ಮಾಡಿಸಿಕೊಳ್ಳಿ: ಹನುಮಂತಪ್ಪ

ವಿಕಲಚೇತನರಿಗೆ ಸಾಧನ–ಸಲಕರಣೆಗಳ ಗುರುತಿಸುವಿಕೆ ಶಿಬಿರದಲ್ಲಿ ತಾಪಂ ಇಒ

» ಚಿತ್ರದುರ್ಗ

ಸಾಧನ–ಸಲಕರಣೆಗಳ ಗುರುತಿಸುವಿಕೆ ಶಿಬಿರದಲ್ಲಿ ಪಾಲ್ಗೊಂಡಿರುವ ಪ್ರತಿಯೊಬ್ಬ ವಿಕಲಚೇತನರು ತಪ್ಪದೇ ತಪಾಸಣೆ ಮಾಡಿಸಿಕೊಂಡು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹನುಮಂತಪ್ಪ ಹೇಳಿದರು.

ನಗರದ ಗುರುಭವನದ ಮುಂಭಾಗದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ ಹಾಗೂ ಕೃತಕ ಅಂಗಾಂಗ ತಯಾರಿಕಾ ಕಾರ್ಪೋರೆಷನ್ ಆಫ್ ಇಂಡಿಯಾ (ಅಲಿಂಕೋ) ವತಿಯಿಂದ ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ ಅಡಿಪ್ ಯೋಜನೆಯಡಿ ವಿಕಲಚೇತನರಿಗೆ ಸಾಧನ–ಸಲಕರಣೆಗಳ ಗುರುತಿಸುವಿಕೆ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ದೈಹಿಕ, ದೃಷ್ಟಿದೋಷ, ಶ್ರವಣದೋಷ ಹಾಗೂ ವಿವಿಧ ರೀತಿಯ ವಿಶೇಷ ಚೇತನರಿಗೆ ಪ್ರತ್ಯೇಕ ಕೊಠಡಿಗಳಲ್ಲಿ ತಪಾಸಣೆ ನಡೆಸಲಾಗುತ್ತದೆ. ನೋಂದಣಿ ಮಾಡಿಸಿಕೊಂಡ ವಿಕಲಚೇತನರಿಗೆ 15 ರಿಂದ 20 ದಿನಗಳ ಒಳಗಾಗಿ ನಿಮ್ಮ ಮೊಬೈಲ್‌ಗೆ ಸಂದೇಶ ರವಾನೆಯಾಗಲಿದ್ದು, ಆಗ ಸಾಧನ ಸಲಕರಣೆಗಳನ್ನು ಪಡೆದುಕೊಳ್ಳಬೇಕು ಎಂದರು.

ಶಿಬಿರದಲ್ಲಿ ತಾಲ್ಲೂಕಿನ ವಿವಿಧೆಡೆಗಳಿಂದ ಆಗಮಿಸಿದ ವಿವಿಧ ಬಗೆಯ ವಿಶೇಷ ಚೇತನರು ಶಿಬಿರದಲ್ಲಿ ಭಾಗಿಯಾಗಿ ನ್ಯೂನತೆಯ ಅಗತ್ಯಕ್ಕೆನುಗುಣವಾಗಿ ಉಚಿತ ಕೃತಕ ಉಪಕರಣಗಳನ್ನು ಪಡೆಯಲು ಶಿಬಿರದಲ್ಲಿ ಪಾಲ್ಗೊಂಡು ಪರೀಕ್ಷೆಗೆ ಒಳಗಾದರು.

ಈ ಸಂದರ್ಭದಲ್ಲಿ ಬಿಆರ್‌ಪಿ ರಾಜೀವ್, ಬಿಆರ್‌ಸಿ ರಾಜು, ಬಸವೇಶ್ವರ ವಿದ್ಯಾಸಂಸ್ಥೆ ಕಾರ್ಯದರ್ಶಿ ವಿ.ಕೆ.ಶಂಕರಪ್ಪ, ಎಂಆರ್‌ಡಬ್ಲ್ಯೂ ಮೈಲಾರಪ್ಪ, ಅಲಿಂಕೋ ವ್ಯವಸ್ಥಾಪಕ ಅಭಿಷೇಖ್ ಸೇರಿದಂತೆ ವಿಆರ್‌ಡಬ್ಲ್ಯೂ, ಯುಆರ್‌ಡಬ್ಲ್ಯೂ, ವಿಕಲಚೇತರು ಭಾಗವಹಿಸಿದ್ದರು.

ಎಲ್ಲಾ ಸಮಸ್ಯೆಗಳನ್ನು ಮೆಟ್ಟಿನಿಂತು ಛಾಯಾಗ್ರಹಣವನ್ನು ಬೆಳೆಸೋಣ

» ಚಳ್ಳಕೆರೆ

ರಾಜ್ಯದಲ್ಲಿ ಕೊರೋನಾ ಸಂದರ್ಭದಲ್ಲಿ ಇಡೀ ಛಾಯಾಗ್ರಾಹಣ ರಂಗ ಸಂಕಷ್ಟದಲ್ಲಿ ಸಿಲುಕಿದ್ದು ಛಾಯಾಗ್ರಾಹಕರಿಗೆ ಸರ್ಕಾರ ಯಾವುದೇ ರೀತಿಯ ಸೌಲಭ್ಯ ನೀಡದೇ ಇದ್ದರೂ ಛಾಯಾಗ್ರಾಹಕರು ತಮ್ಮ ವೃತ್ತಿಯನ್ನೇ ಆಧರಿಸಿ ಪರಿಶ್ರಮದಿಂದ ಕಾರ್ಯನಿರ್ವಹಿಸಿ ಛಾಯಾಗ್ರಾಹಣ ಕ್ಷೇತ್ರಕ್ಕೆ ಗೌರವ ತಂದಿದ್ದಾರೆ. ಎಲ್ಲಾ ಛಾಯಾಗ್ರಾಹಕರು ಈ ಉದ್ಯಮವನ್ನು ಇನ್ನೂ ಹೆಚ್ಚಿನ ರೀತಿಯಲ್ಲಿ ಬೆಳೆಸಲು ಸಹಕಾರ ನೀಡಬೇಕೆಂದು ತಾಲ್ಲೂಕು ಛಾಯಾಗ್ರಾಹಕರ ಸಂಘದ ಅಧ್ಯಕ್ಷ ಪಿ.ರವೀಂದ್ರನಾಥ ತಿಳಿಸಿದರು. ಅವರು, ಅಧಿಕಾರ ಸ್ವೀಕರಿಸಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಛಾಯಾಗ್ರಾಹಣ ಎಲ್ಲರ ಮೆಚ್ಚುಗೆಯ ಉದ್ಯೋಗವಾಗಿ ಪರಿವರ್ತನೆಯಾಗುತ್ತಿದೆ. ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಈ ಕ್ಷೇತ್ರಕ್ಕೆ ಉತ್ಸಾಹದಿಂದ ಕಾಲಿಡುತ್ತಿದ್ದಾರೆ. ಪ್ರತಿಯೊಬ್ಬರಲ್ಲೂ ಛಾಯಾಗ್ರಾಹಣದ ಬಗ್ಗೆ ಹೆಚ್ಚುತ್ತಿರುವ ಆಸಕ್ತಿಯೇ ಕಾರಣವೆಂದರು. ಇದೇ ಸಂದರ್ಭದಲ್ಲಿ ಇತ್ತೀಚೆಗೆ ಬೈಕ್ ಅಪಘಾತದಲ್ಲಿ ಮೃತಪಟ್ಟ ಡ್ರೋನ್ ಸುನೀಲ್‌ರವರ ಕುಟುಂಬಕ್ಕೆ ಸಂಘದಿಂದ 10 ಸಾವಿರ ನಗದು ಹಣವನ್ನು ನೀಡಿ ಕುಟುಂಬಕ್ಕೆ ಸಾಂತ್ವಾನ ಹೇಳಿದರು. ಮುಂದಿನ ದಿನಗಳಲ್ಲಿ ಎಲ್ಲರೂ ಸೇರಿ ಸಂಘದ ಬೆಳವಣಿಗೆಗೆ ಶ್ರಮಿಸೋಣವೆಂದರು. ನೂತನ ಅಧ್ಯಕ್ಷರಾಗಿ ನ್ಯಾಷನಲ್ ಸ್ಟುಡಿಯೊದ ನೇತಾಜಿ ಪ್ರಸನ್ನ, ಉಪಾಧ್ಯಕ್ಷರಾಗಿ ಗೋಕುಲ್‌ಉಮೇಶ್, ತಿರುಮಲಕುಮಾರ್, ಪ್ರಧಾನ ಕಾರ್ಯದರ್ಶಿಯಾಗಿ ಚಂದ್ರಶೇಖರ್, ಖಜಾಂಚಿಯಾಗಿ ಅಜಯ್, ನಿರ್ದೇಶಕರಾಗಿ ಪಿ.ಶ್ರೀನಿವಾಸಲು, ಮೃತ್ಯುಂಜಯ, ಅಶೋಕ್‌ಭಾನು, ರೆಡ್ಡಿಹಳ್ಳಿ ಓಬಣ್ಣ, ರಘು, ಕೋಟ್ರೇಶ್, ನಿರಂಜನ್, ನರಸಿಂಹ, ಬಾಬು, ಸಂಘಟನಾ ಕಾರ್ಯದರ್ಶಿಯಾಗಿ ಪಿಎಸ್‌ಆರ್ ಪಟೇಲ್ ಮುಂತಾದವರು ಉಪಸ್ಥಿತರಿದ್ದರು.

ಡಿಕೆಶಿ ಮಾಸ್ಟರ್ ಮೈಂಡ್ ಆಫ್ ಪೊಲಿಟಿಕಲ್ ಆಗಿದ್ದಾರೆ ಮಮತಾ ಬ್ಯಾನರ್ಜಿ ಮೆಚ್ಚುಗೆ

» ಬೆಂಗಳೂರು

ಡಿಸಿಎಂ ಡಿಕೆ ಶಿವಕುಮಾರ್ ಮಾಸ್ಟರ್ ಮೈಂಡ್ ಆಫ್ ಗೇಮ್ ಆಗಿದ್ದಾರೆ ಎಂದು ಪಶ್ಚಿಮ ಬಂಗಾಳದ ಸಿಎಂ ಮಮತಾ ಬ್ಯಾನರ್ಜಿ ಮೆಚ್ಚುಗೆ ವ್ಯಕ್ತಪಡಿಸಿದ್ದು ತಿಳಿದು ಬಂದಿದೆ.

ನಗರದ ಖಾಸಗಿ ಹೋಟೆಲ್ ನಲ್ಲಿ ನಡೆಯುತ್ತಿರುವ ವಿಪಕ್ಷಗಳ ಒಕ್ಕೂಟದ ಸಭೆಯಲ್ಲಿ ಭಾಗಿಯಾಗಲು ಆಗಮಿಸಿದ ಮಮತಾ ಬ್ಯಾನರ್ಜಿ ಮಾಧ್ಯಮಗಳ ಮುಂದೆ ಮಾತನಾಡುವ ಸಂದರ್ಭದಲ್ಲಿ ಡಿಕೆ ಶಿವಕುಮಾರ್ ಎದುರಾಗಿದ್ದು, ಡಿಕೆಶಿ ಕುರಿತಾದ ಮಮತಾ ಮೆಚ್ಚುಗೆಯ ಮಾತನ್ನಾಡಿದರು.ಬೆಂಗಳೂರಿನ ಹವಾಮಾನ ಬಹಳ ಉತ್ತಮವಾಗಿದೆ.

ರಾಜಕೀಯ ವಾತಾವರಣ ಕೂಡ ಚೆನ್ನಾಗಿದೆ. ಡಿಕೆಶಿ ಮಾಸ್ಟರ್ ಮೈಂಡ್ ಆಫ್ ಗೇಮ್ ಆಗಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಮಮತಾ ಬ್ಯಾನರ್ಜಿ, ಮಣಿಪುರ ಹೊತ್ತಿ ಉರಿಯುದ್ದು, ನೂರಾರು ಮಹಿಳೆಯರು ರಸ್ತೆಯಲ್ಲಿದ್ದಾರೆ. ಮಣಿಪುರದ ಮಹಿಳೆಯರಿಗೆ ನಾನು ಸಲ್ಯೂಟ್ ಮಾಡುತ್ತೇನೆ ಎಂದು ಹೇಳಿದರು.

ರಾಜಕೀಯ ಪಕ್ಷಗಳ ಆನ್‌ಲೈನ್ ಪ್ರಚಾರಕ್ಕೆ ಚುನಾವಣಾ ಆಯೋಗ ಸಿದ್ಧತೆ

» ನವದೆಹಲಿ

ರಾಜಕೀಯ ಪಕ್ಷಗಳು ದೂರದರ್ಶನ ಮತ್ತು ಆಕಾಶವಾಣಿ ಮೂಲಕ ಪ್ರಚಾರ ಕೈಗೊಳ್ಳಲು ಇನ್ನು ಮುಂದೆ ಆನ್‌ಲೈನ್ ಮೂಲಕ ಸಮಯ ನಿಗದಿಪಡಿಸಲಾಗುವುದು ಎಂದು ಕೇಂದ್ರ ಚುನಾವಣಾ ಆಯೋಗ ಹೇಳಿದೆ. ರಾಜಕೀಯ ಪಕ್ಷಗಳಿಗೆ ಡಿಜಿಟಲ್ ಏರ್ ಟೈಮ್ ವೋಚರ್ ವಿತರಿಸಲು ಆಯೋಗವು ಅಸ್ತಿತ್ವದಲ್ಲಿರುವ ನಿಯಮಗಳಿಗೆ ತಿದ್ದುಪಡಿ ತಂದಿದೆ.ಸರ್ಕಾರಿ ಸ್ವಾಮ್ಯದ ಮಾಧ್ಯಮಗಳ ಮೂಲಕ ಪ್ರಚಾರಕ್ಕಾಗಿ ರಾಜಕೀಯ ಪಕ್ಷಗಳಿಗೆ ಉಚಿತವಾಗಿ ಸಮಯ ನಿಗದಿಪಡಿಸುವ ಯೋಜನೆಯು 1998ರ ಜನವರಿಯಲ್ಲಿ ಜಾರಿಗೆ ಬಂದಿದೆ. ಎಲ್ಲ ಪಕ್ಷಗಳಿಗೆ ಸಮಾನವಾಗಿ ಸಮಯ ಲಭ್ಯವಿರಬೇಕು ಎಂಬುದು ಇದರ ಆಶಯವಾಗಿದೆ. ಪ್ರಚಾರಕ್ಕಾಗಿ ನಿರ್ದಿಷ್ಟ ದಿನಾಂಕ ಮತ್ತು ಪ್ರತಿನಿಧಿಗಳ ಸಮ್ಮುಖದಲ್ಲಿ ಡ್ರಾ ಮೂಲಕ ನಿಗದಿಪಡಿಸಲಾಗುತ್ತದೆ.

ಪ್ರಮುಖ ಸುದ್ದಿ

ವಿರೋಧ ಪಕ್ಷಗಳ ಒಗ್ಗಟ್ಟು ಮೋದಿಯನ್ನು ಕಟ್ಟಿಹಾಕಬಹುದೇ?

» ನವದೆಹಲಿ

ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಒಕ್ಕೂಟವನ್ನು ಮಣಿಸಲು ವಿರೋಧ ಪಕ್ಷಗಳ ನಾಯಕರು ಒಟ್ಟಾಗಿ ಇಂಡಿಯಾ ಹೆಸರಿನ ಹೊಸ ಬಣವೊಂದನ್ನು ಸ್ಥಾಪಿಸಿದ್ದಾರೆ. ಈ ಹೊಸ ಒಕ್ಕೂಟದ ಮೂಲಕ ಎಲ್ಲಾ ನಾಯಕರು ಒಂದಾದರೂ ಮೋದಿ ಮಣಿಸುವುದು ಕಷ್ಟ ಎಂದು ವಿಶ್ಲೇಷಣೆ ಮಾಡಲಾಗುತ್ತಿದೆ.

ಇಂತಹದೊಂದು ವಿಶ್ಲೇಷಣೆಗೆ ಮುಖ್ಯ ಕಾರಣ ಪ್ರಧಾನಿ ನರೇಂದ್ರ ಮೋದಿ ಅವರ ಮತ ಪ್ರಮಾಣದ ಗಳಿಕೆಯ ಗುರಿ. ವಿಪಕ್ಷ ನಾಯಕರು ಇಂಡಿಯಾ ಹೊಸ ಒಕ್ಕೂಟವನ್ನು ಸ್ಥಾಪಿಸಿದ ದಿನದಂದೇ ಪ್ರಧಾನಿ ನರೇಂದ್ರ ಮೋದಿ 2024ರ ಚುನಾವಣೆಯಲ್ಲಿ 50% ಅಧಿಕ ಮತ ಪ್ರಮಾಣ ಪಡೆಯುವ ಗುರಿಯನ್ನು ಘೋಷಿಸಿದ್ದಾರೆ.

ವಿರೋಧ ಪಕ್ಷಗಳು ಮೈತ್ರಿ ಮೂಲಕ ಚುನಾವಣೆಯಲ್ಲಿ ಸಾಮಾನ್ಯ ಅಭ್ಯರ್ಥಿಯನ್ನು ಹಾಕುವ ನಿರ್ಧಾರ ಮಾಡುತ್ತಿವೆ. ಆದರೆ ಇದಕ್ಕೂ ಮೊದಲು ಇಂಡಿಯಾ ಒಕ್ಕೂಟಕ್ಕೆ ಒಂದು ಪ್ರಬಲ ನಾಯಕತ್ವದ ಅಗತ್ಯವಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಜನಪ್ರಿಯತೆಗೆ ಸಮಾನಾಗಿ ನಿಲ್ಲಬಲ್ಲ ನಾಯಕತ್ವದ ಟ್ರಂಪ್ ಕಾರ್ಡ್ ಬೇಕಿದೆ. ಸದ್ಯ ಮೋದಿ ವಿರುದ್ಧ ಯಾವುದೇ ನಾಯಕತ್ವದ ಮುಖವಿಲ್ಲ. ಭ್ರಷ್ಟಾಚಾರದ ಕಳಂಕವಿಲ್ಲದ, ವಂಶಪಾರಂಪರ್ಯವಲ್ಲದ ಮತ್ತು ಪ್ರಬಲ ಹಾಗೂ ನಿರ್ಣಾಯಕ ನಿರ್ಧಾರಗಳನ್ನು ತೆಗೆದುಕೊಳ್ಳಬಲ್ಲ ನಾಯಕನ ಅಗತ್ಯ ಇಂಡಿಯಾ ಒಕ್ಕೂಟಕ್ಕಿದೆ. ಮತ ಬ್ಯಾಂಕ್ ಬಲವರ್ಧಿಸುವ ಮುಖವಿದ ಅಗತ್ಯವಿದೆ. ಆ ನಾಯಕತ್ವ ಇನ್ನೂ ಘೋಷಣೆಯಾಗಿಲ್ಲ.

ಹೊಸ ಮೈತ್ರಿಕೂಟವು ಪ್ರಸ್ತುತ ಲೋಕಸಭೆಯಲ್ಲಿ ಸುಮಾರು 140 ಸ್ಥಾನಗಳಲ್ಲಿದೆ. ಎನ್‌ಡಿಎ 330ಕ್ಕೂ ಹೆಚ್ಚು ಸ್ಥಾನಗಳಲ್ಲಿ ಮುಂದಿದೆ. 2019ರಲ್ಲಿ ಎನ್‌ಡಿಎ 50%ಕ್ಕಿಂತ ಹೆಚ್ಚು ಮತಗಳ ಹಂಚಿಕೆಯೊಂದಿಗೆ 225 ಲೋಕಸಭಾ ಸ್ಥಾನಗಳನ್ನು ಗೆದ್ದಿದೆ ಎಂದು ಪ್ರಧಾನಿ ಮೋದಿ ಮಂಗಳವಾರ ಗಮನ ಸೆಳೆದರು. ಆ ಸ್ಥಾನಗಳನ್ನು ಕಸಿದುಕೊಳ್ಳುವುದು ಪ್ರತಿಪಕ್ಷಗಳಿಗೆ ದೊಡ್ಡ ಪ್ರಶ್ನೆಯಾಗಿದೆ. ಇದಲ್ಲದೇ 2014ರಲ್ಲಿ 38%ರಿಂದ 2019ರ ಚುನಾವಣೆಯಲ್ಲಿ ಎನ್‌ಡಿಎ ಮತ ಹಂಚಿಕೆ 44%ಕ್ಕೆ ಏರಿದಬಿಹಾರದಂತಹ ಕೆಲವು ರಾಜ್ಯಗಳಲ್ಲಿ ಪ್ರತಿಪಕ್ಷಗಳ ಒಗ್ಗಟ್ಟು ಯಶಸ್ವಿಯಾಗಿರಬಹುದು ಆದರೆ ಈ ಫಲಿತಾಂಶ ಎನ್‌ಡಿಎ ನೇತೃತ್ವದಲ್ಲಿ ಕಂಡುಬಂದಿದೆ. 2019ರ ಲೋಕಸಭಾ ಚುನಾವಣೆಯಲ್ಲಿ ಎಸ್‌ಪಿ ಮತ್ತು ಬಿಎಸ್‌ಪಿ ಮೈತ್ರಿ ಮಾಡಿಕೊಂಡವು. ಅದಾಗಿಯೂ ಫಲಿತಾಂಶದಲ್ಲಿ ದೊಡ್ಡ ಬದಲಾವಣೆಯಾಗಿಲ್ಲ. 2014ರಲ್ಲಿ 73ರಿಂದ 2019ರಲ್ಲಿ 64ಕ್ಕೆ ಇಳಿಯಿತು. ಬಳಿಕ ಉಪ ಚುನಾವಣೆಯಲ್ಲಿ ಮತ್ತೆರಡು ಸ್ಥಾನಗಳನ್ನು ಬಿಜೆಪಿ ಗೆದ್ದುಕೊಂಡಿತು.

ಪಶ್ಚಿಮ ಬಂಗಾಳ, ಉತ್ತರ ಪ್ರದೇಶ, ದೆಹಲಿ ಮತ್ತು ಪಂಜಾಬ್‌ನಂತಹ ರಾಜ್ಯಗಳಲ್ಲಿ ಪ್ರಾದೇಶಿಕ ಪಕ್ಷಗಳು ಕಾಂಗ್ರೆಸ್ ಪಕ್ಷಕ್ಕೆ ಮತ್ತೆ ಜಾಗ ನೀಡಲು ಬಯಸುವುದಿಲ್ಲ. ಹೀಗಾಗಿ ಪ್ರಧಾನಿ ಮೋದಿ ಇಂಡಿಯಾ ಒಕ್ಕೂಟಕ್ಕೆ ದೊಡ್ಡ ಸವಾಲಾಗಿ ಉಳಿದಿದ್ದಾರೆ.

ಫಾಸ್ಟ್ ನ್ಯೂಸ್

ಎಸ್.ಸಿ.ಪಿ, ಟಿ.ಎಸ್.ಪಿ ಅನುದಾನ ಶೇ. 100 ರಷ್ಟು ಸದ್ಬಳಕೆಯಾಗಬೇಕು: ಶಿವಾನಂದ ಕಾಪಶಿ

» ದಾವಣಗೆರೆ

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭಿವೃದ್ಧಿಗಾಗಿ ಪ್ರತಿ ಇಲಾಖಾವಾರು ವಿವಿಧ ಯೋಜನೆಗಳಡಿ ಬಿಡುಗಡೆಯಾಗುವ ಅನುದಾನವನ್ನು ಶೇ. 100 ರಷ್ಟು ಸಮರ್ಪಕವಾಗಿ ಸದ್ಬಳಕೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಶಿವಾನಂದ ಕಾಪಶಿ ತಿಳಿಸಿದರು.ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಪರಿಶಿಷ್ಟ ಜಾತಿ ವಿಶೇಷ ಘಟಕ ಯೊಜನೆ ಪರಿಶಿಷ್ಟ ಪಂಗಡದ ಗಿರಿಜನ ಉಪಯೋಜನೆಯಡಿ ಅನುಷ್ಠಾನಗೊಳಿಸುತ್ತಿರುವ ಅಭಿವೃದ್ಧಿ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪರಿಶಿಷ್ಟರ ವಿಶೇಷ

ಫಾಸ್ಟ್ ನ್ಯೂಸ್

ಜೈ ಕಿಸಾನ್ ಅಡಿಕೆ ಸ್ಪೆಷಲ್ ಉತ್ಪನ್ನ ಲೋಕಾರ್ಪಣೆ

» ದಾವಣಗೆರೆ

ಜುವಾರಿ ಫಾರ್ಮ್ ಹಬ್ ಲಿಮಿಟೆಡ್ ವತಿಯಿಂದ ಅಕ್ಯುಟೆಕ್ ಆಗ್ರೋ ಪ್ರೈ.ಲಿ. ಆವರಣದಲ್ಲಿ ಮಂಗಳವಾರ ಅಡಿಕೆ ಬೆಲೆಯಲ್ಲಿ ಉಪಯೋಗಿಸಬಹುದಾದ ಜೈಕಿಸಾನ್ ಅಡಿಕೆ ಸ್ಪೆಷಲ್ ಉತ್ಪನ್ನವನ್ನು ಲೋಕಾರ್ಪಣೆಗೊಳಿಸಲಾಯಿತು. ಜುವಾರಿ ಫಾರ್ಮ್ ಹಬ್ ಲಿಮಿಟೆಡ್ ನ ವ್ಯವಸ್ಥಾಪಕ ನಿರ್ದೇಶಕ ಮದನ ಮೋಹನ ಪಾಂಡೆ ಜೈ ಕಿಸಾನ್ ಅಡಿಕೆ ಸ್ಪೆಷಲ್ ಉತ್ಪನ್ನವನ್ನು ಅನಾವರಣಗೊಳಿಸಿದರು. ಅಲ್ಲದೇ ಅಡಿಕೆ ಬೆಲೆಯಲ್ಲಿ ಉತ್ಪನ್ನದ ಪ್ರಾಮುಖ್ಯತೆಯನ್ನು ಅಡಿಕೆ ಬೆಳೆಗಾರರಿಗೆ ತಿಳಿಸಿಕೊಟ್ಟರು.ಚನ್ನಗಿರಿಯ ಟಿಯುಎಂಸಿಓಎಸ್ ಅಧ್ಯಕ್ಷ ಆರ್.ಎಂ. ರವಿ ಮಾತನಾಡಿ, ಜೈ ಕಿಸಾನ್ ಅಡಿಕೆ ಸ್ಪೆಷಲ್ ಇದು ಅಡಿಕೆ ಬೆಳೆಗಾರರಿಗೆ ವರದಾನವಾಗಿದ್ದು, ಅಡಿಕೆ ಬೆಳೆಗೆ ಬೇಕಾಗುವ ಎಲ್ಲ ಪೋಷಕಾಂಶಗಳನ್ನು ಸರಿಯಾದ ಪ್ರಮಾಣದಲ್ಲಿ ಮಿಶ್ರಣ ಮಾಡಿರುವ ಉನ್ನತ ಗೊಬ್ಬರ ಎಂದು ಜೈ ಕಿಸಾನ್ ಕಂಪನಿಯ ಹೊಸ ಉತ್ಪನ್ನದ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು. ಶ್ರೀಧರ್ ಮೂರ್ತಿ ಎಡಿಎ, ದಾವಣಗೆರೆ ಜಿಲ್ಲಾ ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ ಲೋಕಿಕೆರೆ ನಾಗರಾಜ್, ಜಿಲ್ಲಾ ಮತ್ತು ರಾಜ್ಯ ಕೃಷಿ ಪರಿಕರಗಳ ಮಾರಾಟ ಮಂಡಳಿಯ ಅಧ್ಯಕ್ಷರು ಮಾತನಾಡಿ, ಜೈ ಕಿಸಾನ್ ಅಡಿಕೆ ಸ್ಪೆಷಲ್ ಉತ್ತಮ ಗುಣಮಟ್ಟದ ಉತ್ಪನ್ನ ಎಂಬುದಾಗಿ ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಮಸೂದ್ ನದೀಮ್, ಉಮಾಶಂಕರ್, ಡಾ. ಕೆ.ಕೆ. ಸಿಂಗ್, ಅಕ್ಯುಟೆಕ್ ಆಗ್ರೋ ಪ್ರೈ.ಲಿ. ನಿರ್ದೇಶಕರು, ಜುವಾರಿ ಫಾರ್ಮ್ ಹಬ್ ಲಿಮಿಟೆಡ್ ನ ಅಧಿಕಾರಿಗಳು, ದಾವಣಗೆರೆ ಜಿಲ್ಲೆಯ ಕೃಷಿ ಪರಿಕರಗಳ ಮಾರಾಟಗಾರರು, ಅಡಿಕೆ ಬೆಳೆಗಾರರು ಭಾಗವಹಿಸಿದ್ದರು.

ವೃದ್ಧ, ಯುವತಿ ಕಾಣೆ: ಪ್ರಕರಣ ದಾಖಲು

» ಚಿತ್ರದುರ್ಗ

ಚಿತ್ರದುರ್ಗದ ತಾಲ್ಲೂಕಿನ ಹಳವುದರ ಲಂಬಾಣಿಹಟ್ಟಿ ಗ್ರಾಮ ನಿವಾಸಿ ಗಂಗ್ಯಾನಾಯ್ಕ (65) ತಂದೆ ಈಶ್ವರನಾಯ್ಕ್ ಹಾಗೂ ಎಮ್ಮೇಹಟ್ಟಿ ಗ್ರಾಮ ನಿವಾಸಿ ಕರಿಬಸಮ್ಮ (21) ತಂದೆ ಶಿವಣ್ಣ ಅವರು ಕಾಣೆಯಾಗಿರುವ ಕುರಿತು ಪ್ರತ್ಯೇಕ ಪ್ರಕರಣಗಳು ಭರಮಸಾಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.ಜುಲೈ 12 ರಂದು ಕಾಣೆಯಾಗಿರುವ ಕರಿಬಸಮ್ಮ 5 ಅಡಿ ಎತ್ತರ, ಕೋಲುಮುಖ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ಬಲಗೈ ಮೇಲೆ ಸ್ವಾಸ್ಥಿಕ್ ಹಚ್ಚೆ ಗುರುತು ಇರುತ್ತದೆ. ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಮಯದಲ್ಲಿ ಕೆಂಪು ಬಣ್ಣದ ಟಾಪ್, ಕಪ್ಪು ಬಣ್ಣದ ಪ್ಯಾಂಟ್ ಹಾಗೂ ಕಪ್ಪು ಬಣ್ಣದ ವೇಲ್ ಧರಿಸಿರುತ್ತಾಳೆ. ಜೂನ್ 3ರ ಮಧ್ಯರಾತ್ರಿ 1 ಗಂಟೆಯಿಂದ ಕಾಣೆಯಾಗಿರುವ ಗಂಗ್ಯಾನಾಯ್ಕ 5.6 ಅಡಿ ಎತ್ತರ, ಕೋಲುಮುಖ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ ಹೊಂದಿದ್ದಾರೆ. ಕನ್ನಡ ಮತ್ತು ಲಂಬಾಣಿ ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಮಯದಲ್ಲಿ ಬಿಳಿ ಬಣ್ಣದ ಅಂಗಿ, ಬಿಳಿ ಬಣ್ಣದ ಪಂಚೆ ಹಾಗೂ ಬಿಳಿ ಬಣ್ಣದ ಟವಲ್ ಧರಿಸಿರುತಾರೆ.ಈ ಮೇಲ್ಕಂಡ ಯುವತಿ ಕುರಿತು ಮಾಹಿತಿ ತಿಳಿದು ಬಂದಲ್ಲಿ ಭರಮಸಾಗರ ಪೊಲೀಸ್ ಠಾಣೆಗೆ ಸಂಪರ್ಕಿಸಬೇಕು ಎಂದು ಠಾಣಾಧಿಕಾರಿ ತಿಳಿಸಿದ್ದಾರೆ.

ವಸತಿ ಶಾಲೆ ವಿದ್ಯಾರ್ಥಿಗಳ ಕೋರಿಕೆ ವರ್ಗಾವಣೆಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಮೊರಾರ್ಜಿ,ಕಿತ್ತೂರು ರಾಣಿ ಚೆನ್ನಮ್ಮ,ಏಕಲವ್ಯ,ಡಾ. ಬಿ.ಆರ್, ಅಂಬೇಡ್ಕರ್, ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಗಳ 2023–24 ನೇ ಸಾಲಿನ 6ನೇ ತರಗತಿ ಪ್ರವೇಶಾತಿ ಪಟ್ಟಿ ಬಿಡುಗಡೆ ಮಾಡಿದ್ದು ದಾಖಲಾತಿ ಪ್ರಕ್ರಿಯೆ ಪೂರ್ಣಗೊಂಡಿದೆ. ಪ್ರಸ್ತುತ 6ನೇ ತರಗತಿಗೆ ದಾಖಲಾದ ವಿದ್ಯಾರ್ಥಿಗಳು ಅನಿವಾರ್ಯ ಕಾರಣಗಳಿಂದ ವರ್ಗಾವಣೆ ಕೋರಿದಲ್ಲಿ ಅದೇ ವರ್ಗದ ಹಾಗೂ ಲಿಂಗವಾರು ಸ್ಥಾನಗಳು ಲಭ್ಯವಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ವರ್ಗಾವಣೆಗೆ ಅವಕಾಶ ಕಲ್ಪಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ತಾವು ದಾಖಲಾತಿ ಪಡೆದಿರುವ ವಸತಿ ಶಾಲೆಯ ಪ್ರಾಂಶುಪಾಲರಿಗೆ ಜುಲೈ 27 ರ ಒಳಗಾಗಿ ವರ್ಗಾವಣೆಗೆ ಕೋರಿ ಅರ್ಜಿ ಸಲ್ಲಿಸಬಹುದು. ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಮೀಸಲಾತಿ ಹಾಗೂ ಮೆರಿಟ್ ಅನುಸಾರ ಖಾಲಿ ಇರುವ ಸ್ಥಾನಗಳಿಗೆ ಮಾತ್ರ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ನೀಡಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಧಿಕ ಮಾಸ ಏಕೆ ಬರುತ್ತದೆ.....

ಅಧಿಕ ಮಾಸ 2023 ಆರಂಭ: ಪ್ರತಿ ಮೂರು ವರ್ಷಗಳಿಗೊಮ್ಮೆ ಬರುವ ಅಧಿಕ ಮಾಸ 18 ಜುಲೈ 2023 ರಿಂದ ಪ್ರಾರಂಭವಾಗುತ್ತದೆ. ಇದು ಆಗಸ್ಟ್ 16 ರವರೆಗೆ ನಡೆಯುತ್ತದೆ. ಈ ಮಾಸವನ್ನು ವಿಷ್ಣುವಿನ ನೆಚ್ಚಿನ ತಿಂಗಳು ಎಂದು ಕರೆಯಲಾಗುತ್ತದೆ. ಈ ತಿಂಗಳಲ್ಲಿ ಮಾಂಸ ಸೇವನೆಯನ್ನು ನಿಷೇಧಿಸಲಾಗಿದೆ.

ಆರಾಧನೆ ಮತ್ತು ಭಕ್ತಿಯ ದೃಷ್ಟಿಯಿಂದ ಅಧಿಕಮಾಸವನ್ನು ಅತ್ಯಂತ ಪವಿತ್ರವೆಂದು ಪರಿಗಣಿಸಲಾಗಿದೆ.

ಇದನ್ನು ಪುರುಷೋತ್ತಮ ಮಾಸ ಎಂದೂ ಕರೆಯುತ್ತಾರೆ. ಅಧಿಕಮಾಸದಲ್ಲಿ ವಿಷ್ಣುವನ್ನು ಪೂಜಿಸುವವನು ಬದುಕಿರುವಾಗ ಹಣದ ಕೊರತೆಯನ್ನು ಎದುರಿಸುವುದಿಲ್ಲ. ಮರಣಾನಂತರ ಸ್ವರ್ಗದಲ್ಲಿ ಸ್ಥಾನ ಪಡೆಯುತ್ತಾನೆ ಎಂದು ನಂಬಲಾಗಿದೆ. ಹಾಗಾದರೆ ಅಧಿಕಮಾಸಗಳ ಮಹತ್ವ, ಆಚರಣೆಯ ನಿಯಮಗಳನ್ನು ತಿಳಿಯೋಣ.

ಅಧಿಕ ಮಾಸ ಮಹತ್ವ:– ಧರ್ಮಗ್ರಂಥಗಳ ಪ್ರಕಾರ, ಮಾನವ ದೇಹ ನೀರು, ಬೆಂಕಿ, ಆಕಾಶ, ಗಾಳಿ ಮತ್ತು ಭೂಮಿ ಎಂಬ ಪಂಚಭೂತಗಳಿಂದ ಮಾಡಲ್ಪಟ್ಟಿದೆ. ಈ ಐದರ ಸಮತೋಲನದಿಂದ ವ್ಯಕ್ತಿಯು ತನ್ನ ಜೀವನವನ್ನು ಸುಗಮವಾಗಿ ನಡೆಸಲು ಸಾಧ್ಯವಾಗುತ್ತದೆ. ಅಧಿಕಮಾಸದಲ್ಲಿ ಆರಾಧನೆ, ಧ್ಯಾನ ಮಾಡುವುದು ಈ ಐದರ ಸಮತೋಲನವನ್ನು ಉಂಟುಮಾಡುತ್ತದೆ ಎಂದು ಧಾರ್ಮಿಕ ಗ್ರಂಥಗಳಲ್ಲಿ ಹೇಳಲಾಗಿದೆ.

ಇದರಿಂದಾಗಿ ವ್ಯಕ್ತಿಯು ದೈಹಿಕ ಸಂತೋಷ ಮತ್ತು ಪ್ರಗತಿಯನ್ನು ಪಡೆಯುತ್ತಾನೆ. ಅಧಿಕಮಾಸದಲ್ಲಿ ಧಾರ್ಮಿಕ ಕಾರ್ಯಗಳನ್ನು ಮಾಡುವುದರಿಂದ ವ್ಯಕ್ತಿಯ ಜಾತಕ ದೋಷಗಳೂ ಪರಿಹಾರವಾಗುತ್ತವೆ. ಈ ಕಾರಣದಿಂದಲೇ ಮೂರು ವರ್ಷಕ್ಕೊಮ್ಮೆ ಬರುವ ಅಧಿಕಮಾಸಕ್ಕೆ ವಿಶೇಷ ಮಹತ್ವವಿದೆ.

ಮೂರು ವರ್ಷಗಳಿಗೊಮ್ಮೆ ಅಧಿಕಮಾಸ ಏಕೆ ಬರುತ್ತದೆ?: ಸೌರ ವರ್ಷ ಮತ್ತು ಚಂದ್ರನ ವರ್ಷದ ನಡುವಿನ ವ್ಯತ್ಯಾಸವನ್ನು ಸಮತೋಲನಗೊಳಿಸಲು ಪ್ರತಿ ಮೂರು ವರ್ಷಗಳಿಗೊಮ್ಮೆ ಅಧಿಕಮಾಸ ಸಂಭವಿಸುತ್ತದೆ. ಭಾರತೀಯ ಎಣಿಕೆಯ ವ್ಯವಸ್ಥೆಯ ಪ್ರಕಾರ, ಪ್ರತಿ ಸೌರ ವರ್ಷ 365 ದಿನಗಳು ಮತ್ತು ಸುಮಾರು 6 ಗಂಟೆಗಳು. ಆದರೆ ಚಂದ್ರನ ವರ್ಷವನ್ನು 354 ದಿನಗಳು ಎಂದು ಪರಿಗಣಿಸಲಾಗುತ್ತದೆ.

ಇದು ಪ್ರತಿ ಮೂರು ವರ್ಷಗಳಿಗೊಮ್ಮೆ ಸುಮಾರು1ತಿಂಗಳಿಗೆಸಮಾನವಾಗಿರುತ್ತದೆ. ಈ ಅಂತರವನ್ನು ಕಡಿಮೆ ಮಾಡಲು ಪ್ರತಿ ಮೂರು ವರ್ಷಗಳಿಗೊಮ್ಮೆ ಹೆಚ್ಚುವರಿ ತಿಂಗಳು ಬರುತ್ತದೆ. ಇದನ್ನು ಅಧಿಕಮಾಸ ಎಂದು ಕರೆಯಲಾಗುತ್ತದೆ. ಈ ಸಮಯದಲ್ಲಿ ಸೂರ್ಯನು ಸಂಚಾರ ಮಾಡುವುದಿಲ್ಲ.

ಅಧಿಕ ಮಾಸ ಆಚರಣೆ ಹೇಗೆ?: ಶಾಸ್ತ್ರಗಳ ಪ್ರಕಾರ, ಅಧಿಕಮಾಸದಲ್ಲಿ ವಿಷ್ಣು ಆರಾಧನೆ, ಮಂತ್ರಗಳನ್ನು ಕೇಳುವುದು, ಯಜ್ಞ–ಹವನ, ಶ್ರೀಮಹ ದೇವಿ ಭಾಗವತ, ಭಗವತ ಪುರಾಣ, ಶ್ರೀ ವಿಷ್ಣು ಪುರಾಣ, ಗೀತಾ ಪಾರಾಯಣ, ಭಗವಾನ್ ನರಸಿಂಹನ ಕಥೆ ಕೇಳಬೇಕು. ಇದರಿಂದ 33 ಕೋಟಿ ದೇವತೆಗಳು ಸಂತುಷ್ಟರಾಗಿರುತ್ತಾರೆ.

ಅಧಿಕಮಾಸದಲ್ಲಿ ಹಣ, ಧಾನ್ಯ, ಚಪ್ಪಲಿ, ದೀಪ, ವಸ್ತ್ರ, ತಾಂಬೂಲ ದಾನ ಹಾಗೆಯೇ ಗೋವುಗಳ ಸೇವೆ ಮಾಡಬೇಕು. ಇದು ಜಾತಕದಲ್ಲಿ ಗ್ರಹಗಳ ಅಶುಭ ಪರಿಣಾಮಗಳನ್ನು ಕಡಿಮೆ ಮಾಡುತ್ತದೆ. ಅಧಿಕಮಾಸದಲ್ಲಿ ತೀರ್ಥ ಶ್ರಾದ್ಧ, ದರ್ಶ ಶ್ರಾದ್ಧ ಮತ್ತು ನಿತ್ಯ ಶ್ರಾದ್ಧಗಳನ್ನು ಮಾಡಬೇಕು. ಇದು 7 ತಲೆಮಾರಿನ ಪೂರ್ವಜರ ಆತ್ಮಗಳಿಗೆ ತೃಪ್ತಿಯನ್ನು ನೀಡುತ್ತದೆ. ಅಧಿಕಮಾಸದಲ್ಲಿ ತೀರ್ಥ ಸ್ನಾನ ಮಾಡುವ ಮೂಲಕ, ಮೌನ ಉಪವಾಸವನ್ನು ಆಚರಿಸುವ ಮೂಲಕ, ಪ್ರಧಾನ ದೇವತೆಯ ಮುಂದೆ ಅಖಂಡ ದೀಪವನ್ನು ಬೆಳಗಿಸುವ ಮೂಲಕ ಪ್ರಾರ್ಥನೆ ಸಲ್ಲಿಸಬೇಕು.

ಅಧಿಕ ಮಾಸ ಆಚರಣೆಯ ನಿಯಮಗಳು: ಸೂರ್ಯನು ಪ್ರತಿ ತಿಂಗಳು ರಾಶಿಯನ್ನು ಬದಲಾಯಿಸುತ್ತಾನೆ. ಆದರೆ ಅಧಿಕ ಮಾಸದಲ್ಲಿ ಸೂರ್ಯನು ರಾಶಿಯನ್ನು ಬದಲಾಯಿಸುವುದಿಲ್ಲ.ಈ ಕಾರಣದಿಂದಾಗಿ ಈ ತಿಂಗಳು ಮಂಗಳಕರವೆಂದು ಪರಿಗಣಿಸಲಾಗುವುದಿಲ್ಲ. ಈ ಸಮಯದಲ್ಲಿ ಮದುವೆ, ಮುಂಡನ, ಮನೆ ಬಿಸಿಯೂಟ, ಪವಿತ್ರ ದಾರದ ಆಚರಣೆಯಂತಹ ಕೆಲಸಗಳನ್ನು ಮಾಡಬಾರದು.

ತರಕಾರಿಗಳು, ಉದ್ದಿನಬೇಳೆ, ಮೂಲಂಗಿ, ಮೆಂತ್ಯ, ಬೆಳ್ಳುಳ್ಳಿ, ಮಾಂಸ ಆಹಾರ ಇತ್ಯಾದಿಗಳನ್ನು ಸೇವಿಸಬಾರದು. ಬ್ರಹ್ಮಚರ್ಯವನ್ನು ಅನುಸರಿಸಬೇಕು. ಒಂದೇ ಬಾರಿ ನಿದ್ದೆ ಮಾಡಬೇಕು, ನೆಲದ ಮೇಲೆ ಮಲಗುವುದು ಉತ್ತಮ. ಅಧಿಕಮಾಸದಲ್ಲಿ ಕ್ರೋಧ, ಅಹಂಕಾರ, ದುರಾಸೆಗಳನ್ನು ತ್ಯಜಿಸಬೇಕು. ಯಾರ ಮೇಲೂ ದ್ವೇಷ ಇಟ್ಟುಕೊಳ್ಳಬಾರದು, ಅವಮಾನಿಸಬಾರದು. ಇದನ್ನು ಮಾಡದವರಿಗೆ ಈ ಮಾಸದಲ್ಲಿ ಮಾಡಿದ ಧಾರ್ಮಿಕ ಕಾರ್ಯದ ಪುಣ್ಯ ಸಿಗುವುದಿಲ್ಲ.

ಭಾರತದ 10 ಅತ್ಯಂತ ಶ್ರೀಮಂತ ಶಾಸಕರು

» ಕರ್ನಾಟಕ

ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ಇಂದು ಭಾರತದ ಅತ್ಯಂತ ಶ್ರೀಮಂತ ಟಾಪ್ 10 ಶಾಸಕರ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿ ಪ್ರಸ್ತುತ ಕರ್ನಾಟಕ ರಾಜ್ಯದ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಇದ್ದಾರೆ. ಹಾಗಾದರೆ ಇನ್ನುಳಿದ ಒಂಬತ್ತು ಜನ ಯಾವ ರಾಜ್ಯದವರು ಹಾಗೂ ಅವರ ಆಸ್ತಿ ಎಷ್ಟು ಅನ್ನುವ ವಿವರವನ್ನು ಇಲ್ಲಿ ತಿಳಿಯಿರಿ.

ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ಮಾಹಿತಿಯ ಪ್ರಕಾರ, ಭಾರತದಾದ್ಯಂತ ವಿಧಾನಸಭೆಗಳ ಪ್ರತಿ ಸದಸ್ಯರ ಸರಾಸರಿ ಆಸ್ತಿ 13.63 ಕೋಟಿ ರೂಪಾಯಿ ಆಗಿದೆ. ಆದರೆ ಘೋಷಿತ ಕ್ರಿಮಿನಲ್ ಪ್ರಕರಣಗಳನ್ನು ಹೊಂದಿರುವವರು ಯಾವುದೇ ಕ್ರಿಮಿನಲ್ ಪ್ರಕರಣಗಳಿಲ್ಲದವರಿಗಿಂತ ಹೆಚ್ಚು ಆಸ್ತಿ ಹೊಂದಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ.

28 ರಾಜ್ಯ ವಿಧಾನಸಭೆಗಳು ಮತ್ತು ಎರಡು ಕೇಂದ್ರಾಡಳಿತ ಪ್ರದೇಶಗಳ 4,001 ಹಾಲಿ ಶಾಸಕರನ್ನು ಈ ಗುಂಪು ವಿಶ್ಲೇಷಿಸಿದೆ. ಈ ಪೈಕಿ ಕರ್ನಾಟಕ ರಾಜ್ಯದ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು 1,413 ಕೋಟಿ ರೂ. ಆಸ್ತಿಯೊಂದಿಗೆ ದೇಶದ ಅತ್ಯಂತ ಸಿರಿವಂತ ಶಾಸಕರೆನಿಸಿಕೊಂಡಿದ್ದಾರೆ. ಇನ್ನು ಪಶ್ಚಿಮ ಬಂಗಾಳದ ಬಿಜೆಪಿ ಶಾಸಕರೊಬ್ಬರು ಕೇವಲ 1700 ಕೋಟಿ ರೂಪಾಯಿಗಳ ಆಸ್ತಿಯನ್ನು ಘೋಷಿಸಿದ್ದಾರೆ. ಮತ್ತೊಬ್ಬ ಕಾಂಗ್ರೆಸ್ ಶಾಸಕ ಪ್ರಿಯಕೃಷ್ಣ ಅವರು 881 ಕೋಟಿ ರೂಪಾಯಿ ಆಸ್ತಿ ಘೋಷಣೆ ಮಾಡುವುದರೊಂದಿಗೆ ಎರಡನೇ ಸ್ಥಾನವನ್ನು ಅಲಂಕರಿಸಿದ್ದಾರೆ.

ದೇಶದ ಟಾಪ್ 10 ಶಾಸಕರ ಪಟ್ಟಿಯನ್ನು ಇಲ್ಲಿ ನೀಡಲಾಗಿದೆ. ಇದರಲ್ಲಿ ಕರ್ನಾಟಕದ ನಾಲ್ವರು ಶಾಸಕರಿದ್ದಾರೆ. ಡಿ.ಕೆ.ಶಿವಕುಮಾರ್, ಕೆ.ಎಚ್.ಪುಟ್ಟಸ್ವಾಮಿ ಗೌಡ, ಪ್ರಿಯಕೃಷ್ಣ, ಸುರೇಶ್ ಬಿ.ಎಸ್ ಇವರು ಕರ್ನಾಟಕದ ಸಿರಿವಂತ ಶಾಸಕರಾಗಿದ್ದಾರೆ. ಇನ್ನುಳಿದ 6 ಜನ ಸಿರಿವಂತ ಶಾಸಕರು ಬೇರೆ ರಾಜ್ಯದವರಾಗಿದ್ದಾರೆ.

ರಾಜ್ಯ ಸರ್ಕಾರಿ ನಿವೃತ್ತ ನೌಕರರ ಜಿಲ್ಲಾ ಸಂಘ: ಜುಲೈ 22ರಂದು ಸಭೆ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಜಿಲ್ಲಾ ಸಂಘದ ವತಿಯಿಂದ 2022–23 ನೇ ಸಾಲಿನ ಸರ್ವ ಸದಸ್ಯರ ಮಹಾಸಭೆ ಸಮಾರಂಭವನ್ನು ಇದೇ ಜುಲೈ 22ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಚಳ್ಳಕೆರೆ ರಸ್ತೆಯ ಶ್ರೀ ವಿನಾಯಕ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ. ಚಿತ್ರದುರ್ಗ ಶಾರದಾ ರಾಮಕೃಷ್ಣ ಆಶ್ರಮದ ಕಾರ್ಯದರ್ಶಿ ಶ್ರೀ ಸ್ವಾಮಿ ಬ್ರಹ್ಮ ನಿಷ್ಠಾನಂದಜೀ ಮಹಾರಾಜ್ ಸಮಾರಂಭ ಉದ್ಘಾಟಿಸುವರು. ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಜಿಲ್ಲಾ ಸಂಘದ ಅಧ್ಯಕ್ಷ ವೈ. ಚಂದ್ರಶೇಖರಯ್ಯ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಸಂಘದ ಗೌರವಾಧ್ಯಕ್ಷ ಆರ್.ರಂಗಪ್ಪ ರೆಡ್ಡಿ ಘನ ಉಪಸ್ಥಿತಿ ವಹಿಸುವರು. ಮುಖ್ಯ ಅತಿಥಿಗಳಾಗಿ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ. ರವಿಶಂಕರ್ ರೆಡ್ಡಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಜಿಲ್ಲಾ ಸಂಘದ ಅಧ್ಯಕ್ಷ ಕೆ.ಟಿ. ತಿಮ್ಮಾರೆಡ್ಡಿ, ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾ ಸಂಘದ ಅಧ್ಯಕ್ಷ ಕೆ.ಎಂ ಶಿವಸ್ವಾಮಿ, ನಿವೃತ್ತ ನೌಕರರ ಸಂಘದ ಸಾಂಸ್ಕೃತಿಕ ಹಾಗೂ ಮನೋರಂಜನ ಕೇಂದ್ರ ಅಧ್ಯಕ್ಷ ಕೆ. ವಾಸುದೇವ ರೆಡ್ಡಿ. ವಿಶೇಷ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ಹಿರಿಯೂರು ಅಧ್ಯಕ್ಷ ಸಿ.ಆರ್.ಏಕಾಂತಪ್ಪ, ಹೊಸದುರ್ಗ ಅಧ್ಯಕ್ಷ ಬಿ.ವೀರಾಭದ್ರಾಚಾರ್, ಹೊಳಲ್ಕೆರೆ ಅಧ್ಯಕ್ಷ ಎ.ಸಿ.ಗಂಗಾಧರಪ್ಪ, ಚಳ್ಳಕೆರೆ ಅಧ್ಯಕ್ಷ ಎಂ.ಕರಿಯಪ್ಪ, ಮೊಳಕಾಲ್ಮುರು ಅಧ್ಯಕ್ಷ ಎಸ್.ಟಿ.ಬ್ರಹ್ಮಾನಂದ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

ಕೊಂಡಜ್ಜಿ ವಸತಿ ಶಾಲೆಗೆ ಜಿಲ್ಲಾಧಿಕಾರಿ ಅನಿರೀಕ್ಷಿತ ಭೇಟಿ; ಮಕ್ಕಳೊಂದಿಗೆ ಶೈಕ್ಷಣಿಕ ಚಟುವಟಿಕೆಗಳ ಪರಿಶೀಲನೆ

» ದಾವಣಗೆರೆ

ಪರಿಶಿಷ್ಟ ಪಂಗಡಗಳ ಇಲಾಖೆಯಡಿ ನಡೆಸಲಾಗುತ್ತಿರುವ ಕೊಂಡಜ್ಜಿಯ ಇಂದಿರಾಗಾಂಧಿ ವಸತಿ ಶಾಲೆಗೆ ಮಂಗಳವಾರ ಜಿಲ್ಲಾಧಿಕಾರಿ ಶಿವಾನಂದ ಕಾಪಶಿಯವರು ಅನಿರೀಕ್ಷಿತವಾಗಿ ಭೇಟಿ ನೀಡಿ ಪರಿಶೀಲಿಸಿದರು.

ಸರ್ಕಾರ ಮಕ್ಕಳ ಭವಿಷ್ಯಕ್ಕಾಗಿ ವಸತಿ ಶಾಲೆಗಳನ್ನು ಸ್ಥಾಪನೆ ಮಾಡುವ ಮೂಲಕ ಬಡ ಮಕ್ಕಳಿಗೆ ಅನುಕೂಲತೆಗಳನ್ನು ಕಲ್ಪಿಸಿದೆ. ಈ ಹಿಂದೆ ಇಂತಹ ಸೌಲಭ್ಯಗಳು ಇರಲಿಲ್ಲ, ಈಗ ಇಂತಹ ಸೌಲಭ್ಯ ನಿಮಗೆ ಕಲ್ಪಿಸಲಾಗಿದ್ದು ಮಕ್ಕಳು ದೇಶದ ಆಸ್ತಿಯಾಗಬೇಕೆಂದು ಇಂತಹ ಸೌಲಭ್ಯ ಕಲ್ಪಿಸಿದ್ದು ಇದನ್ನು ಸದುಪಯೋಗ ಮಾಡಿಕೊಳ್ಳಬೇಕೆಂದು ಮಕ್ಕಳಿಗೆ ತಿಳಿಸಿದರು. ಶಾಲೆಯಲ್ಲಿ ಸುಚಿತ್ವವನ್ನು ಕಾಪಾಡಿಕೊಳ್ಳಬೇಕೆಂದು ಪ್ರಾಂಶುಪಾಲರಿಗೆ ತಿಳಿಸಿ ಇದೇ ವೇಳೆ ವಿದ್ಯಾರ್ಥಿಗಳ ಕುಂದುಕೊರತೆಗಳನ್ನು ಆಲಿಸಿ ಅತ್ಯುತ್ತಮ ಫಲಿತಾಂಶ ಬರುವ ನಿಟ್ಟಿನಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಕೈಗೊಳ್ಳಲು ಸೂಚನೆ ನೀಡಿದರು.

ಈ ವೇಳೆ ಪ್ರಾಂಶುಪಾಲರಾದ ರೂಪ ಮತ್ತು ಸಿಬ್ಬಂದಿಯವರು ಉಪಸ್ಥಿತರಿದ್ದರು.

ಹೊಸ ಸಂತೆಮೈದಾನದ ವ್ಯಾಪಾರದ ಕಟ್ಟೆಗಳ ಬಾಡಿಗೆ